# ತುಂಗ ಬಿಂಬ

ಸತ್ಯ ಮತ್ತು ಧೈರ್ಯದ ಧ್ವನಿ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: 04 Vol: 04 | ಸಂಚಿಕೆ: 105 Issue: 105 | ರಾಯಚೂರು Raichur 07-10-2026 | ಬುಧವಾರ Wednesday | ಪುಟ : 04 Page: 04 | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ Editor: Gururaja K 98863 85685







## 9 ಗಂಟೆಗಳ ಧರಣಿ ಬಳಿಕ ರಾಹುಲ್, ಪ್ರಿಯಾಂಕಾ ಪೊಲೀಸ್ ವಶಕ್ಕೆ

ನವದೆಹಲಿ: ಮತದಾರರ ಪಟ್ಟಿಗಳ ವಿಶೇಷ ತೀವ್ರ ಪರಿಷ್ಕರಣೆ (SIR) ಹಾಗೂ ಚುನಾವಣಾ ಆಯೋಗದ ಕಾರ್ಯವೈಖರಿಯನ್ನು ವಿರೋಧಿಸಿ ದೆಹಲಿಯ ಆಕಾಶವಾಣಿ ಭವನದ ಆವರಣದಲ್ಲಿ ಸುಮಾರು ಒಂಬತ್ತು ಗಂಟೆಗಳ ಕಾಲ ಧರಣಿ ನಡೆಸಿದ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಕಾಂಗ್ರೆಸ್ ಸಂಸದೆ ಪ್ರಿಯಾಂಕಾ ಗಾಂಧಿ ವಾದ್ರಾ ಸೇರಿದಂತೆ ಹಲವು ವಿರೋಧ ಪಕ್ಷದ ನಾಯಕರನ್ನು ಮಂಗಳವಾರ ಸಂಜೆ ದೆಹಲಿ ಪೊಲೀಸರು ವಶಕ್ಕೆ ಪಡೆದರು.



ಚುನಾವಣಾ ಆಯೋಗದ ಕಚೇರಿಗೆ ತೆರಳಿ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರನ್ನು ಭೇಟಿಯಾಗಲು INDIA ಒಕ್ಕೂಟದ ಸಂಸದರು ಮುಂದಾಗಿದ್ದರು. ಆದರೆ ಭದ್ರತಾ ಸಿಬ್ಬಂದಿ ಮೆರವಣಿಗೆಯನ್ನು ತಡೆದ ಹಿನ್ನೆಲೆಯಲ್ಲಿ ಪ್ರತಿಭಟನೆ ತೀವ್ರಗೊಂಡಿತು. ಬಳಿಕ ರಾಹುಲ್ ಗಾಂಧಿ, ಪ್ರಿಯಾಂಕಾ ಗಾಂಧಿ ಹಾಗೂ ಇತರ ನಾಯಕರು ಆಕಾಶವಾಣಿ ಭವನದ ಆವರಣದಲ್ಲಿ ಧರಣಿ ಆರಂಭಿಸಿದರು.

ಧರಣಿಯನ್ನು ಅಂತ್ಯಗೊಳಿಸುವಂತೆ ಪೊಲೀಸರು ಹಲವು ಬಾರಿ ಮನವಿ ಮಾಡಿದರೂ ನಾಯಕರು ಸ್ಥಳದಿಂದ ತೆರಳಲು ನಿರಾಕರಿಸಿದರು. "ಚುನಾವಣಾ ಆಯುಕ್ತರನ್ನು ಭೇಟಿಯಾಗಿ ನಮ್ಮ ಆಕ್ಷೇಪಗಳನ್ನು ತಿಳಿಸುವವರೆಗೆ ಪ್ರತಿಭಟನೆ ಮುಂದುವರಿಸುತ್ತೇವೆ" ಎಂದು ರಾಹುಲ್ ಗಾಂಧಿ ಹೇಳಿದ್ದರು. ಸುಮಾರು ಒಂಬತ್ತು ಗಂಟೆಗಳ ಬಳಿಕ ಪೊಲೀಸರು ಪ್ರತಿಭಟನಾಕಾರರನ್ನು ತೆರವುಗೊಳಿಸಿ ರಾಹುಲ್ ಗಾಂಧಿ, ಪ್ರಿಯಾಂಕಾ ಗಾಂಧಿ ಸೇರಿದಂತೆ ಹಲವು ನಾಯಕರನ್ನು ವಶಕ್ಕೆ ಪಡೆದರು. ಕೆಲವು ಪ್ರತಿಭಟನಾಕಾರರನ್ನು ಕಿಂಗ್ಸ್‌ವೇ ಕ್ಯಾಂಪ್‌ನ ನ್ಯೂ ಪೊಲೀಸ್ ಲೈನ್ಸ್‌ಗೆ ಕರೆದೊಯ್ಯಲಾಗಿದೆ ಎಂದು ವರದಿಯಾಗಿದೆ.

ಚರಣ್‌ಜಿತ್ ಸಿಂಗ್ ಚನ್ನಿ, ದೀಪೇಂದರ್ ಹೂಡಾ, ಕೆ.ಸಿ. ವೇಣುಗೋಪಾಲ್, ಪವನ್ ಖೇರಾ ಸೇರಿದಂತೆ ಹಲವು ಕಾಂಗ್ರೆಸ್ ಮತ್ತು INDIA ಒಕ್ಕೂಟದ ಮುಖಂಡರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು. ಪ್ರತಿಭಟನಾ ಮಾರ್ಗದಲ್ಲಿ ಭಾರಿ ಪೊಲೀಸ್ ಬಂದೋಬಸ್ತ್ ಮಾಡಲಾಗಿದ್ದು, ಬ್ಯಾರಿಕೇಡ್‌ಗಳನ್ನು ಅಳವಡಿಸಲಾಗಿತ್ತು.

ವಿರೋಧ ಪಕ್ಷಗಳ ಸಂಸದರು ಚುನಾವಣಾ ಆಯೋಗವನ್ನು ಭೇಟಿಯಾಗಿ ಎಸ್‌ಐಆರ್ ಪ್ರಕ್ರಿಯೆ ಹಾಗೂ ಮತದಾರರ ಪಟ್ಟಿಯಲ್ಲಿನ ಬದಲಾವಣೆಗಳ ಕುರಿತು ತಮ್ಮ ಆಕ್ಷೇಪಗಳನ್ನು ಸಲ್ಲಿಸಲು ಬಯಸಿರುವುದಾಗಿ ತಿಳಿಸಿದರು. ರಾಹುಲ್ ಗಾಂಧಿ ಚುನಾವಣಾ ಆಯೋಗದ ವಿರುದ್ಧ ಮತ ಕಳವು ಆರೋಪ ಮಾಡಿ, ಸಂಸದರ ಮಾತು ಕೇಳಬೇಕು ಎಂದು ಒತ್ತಾಯಿಸಿದರು. ಈ ಆರೋಪಗಳು ವಿರೋಧ ಪಕ್ಷಗಳದ್ದಾಗಿದ್ದು, ಚುನಾವಣಾ ಆಯೋಗವು ಅವುಗಳನ್ನು ಒಪ್ಪಿಕೊಂಡಿಲ್ಲ.

ಇನ್ನೊಂದೆಡೆ, ಸಂಜೆ 4 ಗಂಟೆಯವರೆಗೆ ಯಾವುದೇ ರಾಜಕೀಯ 2ನೇ ಪುಟಕ್ಕೆ

## ಎಸ್‌ಐಆರ್ ರದ್ದುಪಡಿಸಿ, ಮುಖ್ಯ ಚುನಾವಣಾ ಆಯುಕ್ತರ ರಾಜೀನಾಮೆಗೆ INDIA ಒಕ್ಕೂಟ ಆಗ್ರಹ

ನವದೆಹಲಿ: ಮತದಾರರ ಪಟ್ಟಿಗಳ ವಿಶೇಷ ತೀವ್ರ ಪರಿಷ್ಕರಣೆ (SIR) ಪ್ರಕ್ರಿಯೆಯನ್ನು ತಕ್ಷಣ ರದ್ದುಪಡಿಸಬೇಕು ಹಾಗೂ ಚುನಾವಣಾ ಆಯೋಗದ ಕಾರ್ಯವೈಖರಿ ಕುರಿತು ಎದ್ದಿರುವ ಪ್ರಶ್ನೆಗಳಿಗೆ ಸ್ಪಷ್ಟನೆ ನೀಡಬೇಕು ಎಂದು ಆಗ್ರಹಿಸಿ INDIA ಒಕ್ಕೂಟದ ಸಂಸದರು ನವದೆಹಲಿಯಲ್ಲಿ ಪ್ರತಿಭಟನೆ ನಡೆಸಿದರು.




ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ ವಾದ್ರಾ, ಸಮಾಜವಾದಿ ಪಕ್ಷದ ನಾಯಕ ಅಖಿಲೇಶ್ ಯಾದವ್, ಟಿಎಂಸಿ ಸೇರಿದಂತೆ INDIA ಒಕ್ಕೂಟದ ವಿವಿಧ ಪಕ್ಷಗಳ ಸಂಸದರು ಪ್ರತಿಭಟನೆಯಲ್ಲಿ ಭಾಗವಹಿಸಿದರು. ರಾಯಚೂರು ಲೋಕಸಭಾ ಕ್ಷೇತ್ರದ ಸಂಸದ ಜಿ. ಕುಮಾರ ನಾಯಕ ಕೂಡ ಹೋರಾಟದಲ್ಲಿ ಪಾಲ್ಗೊಂಡಿದ್ದರು.

ಸಂಸತ್ತಿನ ಮಕರ ದ್ವಾರದಿಂದ ಚುನಾವಣಾ ಆಯೋಗದ ಕೇಂದ್ರ ಕಚೇರಿ ನಿರ್ವಾಚನ್ ಸದನ್ ಕಡೆಗೆ ಸಂಸದರು ಮೆರವಣಿಗೆ ನಡೆಸಿ, ಎಸ್‌ಐಆರ್ ಪ್ರಕ್ರಿಯೆಯ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಮತದಾರರ ಪಟ್ಟಿಗಳ ಪರಿಷ್ಕರಣೆಯ ಸಂದರ್ಭದಲ್ಲಿ ಅರ್ಹ ಮತದಾರರ ಹೆಸರುಗಳು ಕೈಬಿಡುವ ಆತಂಕವಿದೆ ಎಂದು ಆರೋಪಿಸಿದ ನಾಯಕರು, ಪ್ರಕ್ರಿಯೆ ಪಾರದರ್ಶಕ ಮತ್ತು ನ್ಯಾಯಸಮ್ಮತವಾಗಿರಬೇಕು 2ನೇ ಪುಟಕ್ಕೆ

## ಶಶೀಲ್ ನಮೋಶಿ ಪರ ವಿವಿಧ ಶಿಕ್ಷಣ ಸಂಸ್ಥೆಗಳಲ್ಲಿ ಡಿ.ಎಸ್. ಅರುಣ್, ಶಿವರಾಜ ಪಾಟೀಲ ಮತಯಾಚನೆ

ರಾಯಚೂರು: ಅಕ್ಟೋಬರ್ 23ರಂದು ನಡೆಯಲಿರುವ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆಯಲ್ಲಿ ಎನ್‌ಡಿಎ ಮೈತ್ರಿಕೂಟದ ಅಭ್ಯರ್ಥಿ ಶಶೀಲ್ ನಮೋಶಿ ಅವರನ್ನು ಬೆಂಬಲಿಸುವಂತೆ ವಿಧಾನ ಪರಿಷತ್ ಸದಸ್ಯ ಡಿ.ಎಸ್. ಅರುಣ್ ಹಾಗೂ ರಾಯಚೂರು ನಗರ ಶಾಸಕ ಡಾ. ಎಸ್. ಶಿವರಾಜ ಪಾಟೀಲ ವಿವಿಧ ಶಿಕ್ಷಣ ಸಂಸ್ಥೆಗಳಿಗೆ ಭೇಟಿ ನೀಡಿ ಶಿಕ್ಷಕರಲ್ಲಿ ಮತಯಾಚಿಸಿದರು.




ನಗರದ ರೇಸ್ ಚಾಣಕ್ಯ ಶಾಲೆ, ವೇದಾಂತ ಕಾಲೇಜು, ರೇಸ್ ಕಾನ್ಸೆಪ್ಟ್ ಶಾಲೆ, ಕೊಂಡ ಸರಸ್ವತಮ್ಮ ಹನುಮಂತಯ್ಯ ಶಾಲೆ ಹಾಗೂ ವಿಜ್ಞಾನ ಶಾಲೆಗಳಿಗೆ ಭೇಟಿ ನೀಡಿದ ನಾಯಕರು, ಶಿಕ್ಷಕರೊಂದಿಗೆ ಸಂವಾದ ನಡೆಸಿ ಅವರ ಬೇಡಿಕೆಗಳನ್ನು ಆಲಿಸಿದರು.

ವಿಧಾನ ಪರಿಷತ್ ಸದಸ್ಯ ಡಿ.ಎಸ್. ಅರುಣ್ ಮಾತನಾಡಿ, ಶಶೀಲ್ ನಮೋಶಿ ಅವರು ವಿಧಾನ ಪರಿಷತ್‌ನಲ್ಲಿ ಹಲವು ಅವಧಿಗಳಿಂದ ಶಿಕ್ಷಕರ ಸಮಸ್ಯೆಗಳು ಹಾಗೂ ಬೇಡಿಕೆಗಳ ಕುರಿತು ಧ್ವನಿ ಎತ್ತಿದ್ದಾರೆ. ಶಿಕ್ಷಕರ ಸಮಸ್ಯೆಗಳ ಬಗ್ಗೆ ಅವರಿಗೆ ನೇರ ಅನುಭವವಿದ್ದು, ಕಲ್ಯಾಣ ಕರ್ನಾಟಕ ಭಾಗಕ್ಕೆ ಸಂಬಂಧಿಸಿದ 371(ಜೆ) ಸೌಲಭ್ಯಗಳ ವಿಷಯದಲ್ಲಿಯೂ ಪರಿಷತ್‌ನಲ್ಲಿ ನಿರಂತರವಾಗಿ ವಿಚಾರ ಪ್ರಸ್ತಾಪಿಸಿದ್ದಾರೆ ಎಂದು ಹೇಳಿದರು.

ಶಿಕ್ಷಕರಿಗೆ ಕೌಶಲ್ಯ ತರಬೇತಿ, ಆರೋಗ್ಯ ಮತ್ತು ವಿಮಾ ಸೌಲಭ್ಯ, ಕನಿಷ್ಠ ವೇತನ ಹಾಗೂ ಪಿಂಚಣಿ ಸೇರಿದಂತೆ ಹಲವು ವಿಷಯಗಳಲ್ಲಿ ಪರಿಣಾಮಕಾರಿ ಕ್ರಮಗಳ ಅಗತ್ಯವಿದೆ. ಈ ಹಿನ್ನೆಲೆಯಲ್ಲಿ ಶಿಕ್ಷಕರು ಶಶೀಲ್ ನಮೋಶಿ ಅವರಿಗೆ ಬೆಂಬಲ ನೀಡಬೇಕು ಎಂದು ಮನವಿ ಮಾಡಿದರು.

ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಹಲವು ಶಿಕ್ಷಣ ಸಂಸ್ಥೆಗಳನ್ನು ಅನುದಾನ ವ್ಯಾಪ್ತಿಗೆ ತರಲಾಗಿತ್ತು 2ನೇ ಪುಟಕ್ಕೆ

## ಇಲಾಖೆಯ ಅಧಿಕಾರಿಗಳು ಸಮನ್ವಯದಿಂದ ಕೆಲಸ ನಿರ್ವಹಿಸಿ: ಜಿಲ್ಲಾಧಿಕಾರಿ

ರಾಯಚೂರು ಅ. 06 (ಕರ್ನಾಟಕ ವಾರ್ತೆ): ಜಿಲ್ಲೆಯಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಮುಂಜಾಗ್ರತೆವಹಿಸಲು ವಿವಿಧ ಇಲಾಖೆಯ ಅಧಿಕಾರಿಗಳು ಸಮನ್ವಯದಿಂದ ಕೆಲಸ ನಿರ್ವಹಿಸಬೇಕೆಂದು ಜಿಲ್ಲಾಧಿಕಾರಿ ಪೂವಿತಾ ಎಸ್. ಹೇಳಿದರು.



ಅಕ್ಟೋಬರ್ 06ರ ಮಂಗಳವಾರ ದಂದು ರಾಯಚೂರು ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ವಿವಿಧ ಇಲಾಖೆ ಅಧಿಕಾರಿಗಳಿಗೆ ಕರೆದ ಜಿಲ್ಲಾ ದೌರ್ಜನ್ಯ ಪ್ರಕರಣ ನಿಯಂತ್ರಣ ಸಮಿತಿ ಸಭೆಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಮುಂಜಾಗ್ರತೆವಹಿಸಲು ದೌರ್ಜನ್ಯ ಪ್ರಕರಣಗಳ ತಾಲ್ಲೂಕು ನಿಯಂತ್ರಣ ಸಮಿತಿ ಸಮಿತಿ ಜಿಲ್ಲೆಯ ಆಯಾ ತಾಲ್ಲೂಕಿನ ತಹಶಿಲ್ದಾರರ ಅಧ್ಯಕ್ಷತೆಯಲ್ಲಿ ರಚಿಸಲಾಗಿದ್ದು ಇದರಲ್ಲಿ ಇರುವ ವಿವಿಧ ಇಲಾಖೆಯ ಅಧಿಕಾರಿಗಳು ಸಮನ್ವಯದಿಂದ ಕೆಲಸ ಮಾಡುವುದರ ಜೊತೆಗೆ ಪ್ರತಿ ಬುಧವಾರ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಗುರುತಿಸಲಾದ ಸೂಕ್ಷ್ಮ ಮತ್ತು ಅತಿ ಸೂಕ್ಷ್ಮ ಗ್ರಾಮಗಳಲ್ಲಿ ಸಭೆ ನಡೆಸುವ ಮೂಲಕ ವಿವಿಧ ಸಮುದಾಯಗಳಲ್ಲಿ ಸೌಹಾರ್ದತೆ ಮೂಡಿಸುವ ಕೆಲಸ ಮಾಡಬೇಕು ಎಂದರು.

ಜಿಲ್ಲೆಯ ಯಾವುದೇ ಸ್ಥಳದಲ್ಲಿ ದೌರ್ಜನ್ಯ. ಬಾಲ್ಯ ವಿವಾಹ, ಬಾಲ ಕಾರ್ಮಿಕತೆ, ಅಸ್ಪೃಶತೆ ಆಚರಣೆಯಂತಹ ಸಮಸ್ಯೆಗಳು ತಮ್ಮ ಗಮನಕ್ಕೆ ಬಂದರೆ ಈ ಕುರಿತು ತಕ್ಷಣ ಕ್ರಮವಹಿಸಬೇಕು. ಜಿಲ್ಲೆಯ ಯಾವುದೇ ಸಮಸ್ಯೆಗಳು ನಮಗಿಂತ ಮೊದಲು ಆಯಾ ತಾಲೂಕಿನ ಸಮಸ್ಯೆಗಳು ತಮಗೆ ಮೊದಲು ತಿಳಿಯುತ್ತವೆ. ಹಾಗಾಗಿ ಈ ಕುರಿತು ಅಧಿಕಾರಿಗಳು ಗಮನ ಹರಿಸಬೇಕು ಎಂದರು.

ಪ್ರತಿ ಬುಧವಾರ ಈಗಾಗಲೇ ಗುರುತಿಸಿರುವ ಸೆನ್ಸಿಟಿವ್ ಹಳ್ಳಿಗಳಲ್ಲಿ ಆಯಾ ತಾಲೂಕಿನ ತಹಶಿಲ್ದಾರರು, ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು ಒಳಗೊಂಡ ಸಮಿತಿ ಸಭೆ ಪ್ರತಿವಾರ ನಡೆಸಿ ಸಭೆ ನಡೆಸಿದ ಮಾಹಿತಿ ನೀಡಬೇಕು. ಅಧಿಕಾರಿಗಳು ಸಮನ್ವಯದಿಂದ ಕೆಲಸ ಮಾಡಿದರೆ ಯಾವುದೇ ಸಮಸ್ಯೆಗಳು ಬರುವುದಿಲ್ಲ ಎಂದು ಹೇಳಿದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ ಅವರು ಮಾತನಾಡಿ ಕೆಲವು ತಿಂಗಳುಗಳಿದ ಜಿಲ್ಲೆಯಲ್ಲಿ ಬಹಳ ದೌರ್ಜನ್ಯ ಪ್ರಕರಣಗಳು 2ನೇ ಪುಟಕ್ಕೆ

## ಎಸ್‌ಐಆರ್ ವಿರುದ್ಧ ಅ.9ರಂದು ರಾಯಚೂರಿನಲ್ಲಿ ಬೃಹತ್ ಹೋರಾಟ

ರಾಯಚೂರು: ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್ ಐಆರ್) ಪ್ರಕ್ರಿಯೆಯನ್ನು ಹಿಂಪಡೆಯಬೇಕು ಹಾಗೂ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರನ್ನು ಹುದ್ದೆಯಿಂದ ವಜಾಗೊಳಿಸಬೇಕು ಎಂಬ ಬೇಡಿಕೆ ಮುಂದಿಟ್ಟುಕೊಂಡು ಇಂಡಿಯಾ ಮೈತ್ರಿಕೂಟದ ನೇತೃತ್ವದ ಮತ ಕಾವಲು ಸಮಿತಿಯು ಅ.9ರಂದು ನಗರದಲ್ಲಿ ಬೃಹತ್ ಪ್ರತಿಭಟನಾ ಮೆರವಣಿಗೆ ನಡೆಸಲಿದೆ ಎಂದು ಸಮಿತಿ ಮುಖಂಡ ಹಾಗೂ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಕೆ. ಶಾಂತಪ್ಪ ಹೇಳಿದರು.



ನಗರದ ನೃಪತುಂಗ ಹೋಟೆಲ್‌ನಲ್ಲಿ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ನೇತಾಜಿ ನಗರದಿಂದ ಡಾ.ಬಿ.ಆರ್. ಅಂಬೇಡ್ಕರ್ ವೃತ್ತದವರೆಗೆ ಮೆರವಣಿಗೆ ನಡೆಸಿ ಎಸ್‌ಐಆರ್ ವಿರುದ್ಧ ಆಕ್ರೋಶ ವ್ಯಕ್ತಪಡಿಸಲಾಗುವುದು. ಮತದಾರರ ಪಟ್ಟಿ ಪರಿಷ್ಕರಣೆಯಲ್ಲಿ ನಿಷ್ಪಕ್ಷಪಾತತೆ ಕಾಯ್ದುಕೊಳ್ಳಲಾಗುತ್ತಿಲ್ಲ ಎಂಬ ಅನುಮಾನ ಸಾರ್ವಜನಿಕ ವಲಯದಲ್ಲಿ ಮೂಡಿದೆ. ನಿರ್ದಿಷ್ಟ ರಾಜಕೀಯ ಪಕ್ಷಕ್ಕೆ ಅನುಕೂಲವಾಗುವ ರೀತಿಯಲ್ಲಿ ಪ್ರಕ್ರಿಯೆ ನಡೆಯುತ್ತಿದೆ ಎಂಬ ಆತಂಕವೂ ವ್ಯಕ್ತವಾಗುತ್ತಿದೆ ಎಂದು ಆರೋಪಿಸಿದರು.

ಪ್ರಜಾಪ್ರಭುತ್ವದಲ್ಲಿ ಮತದಾನದ ಹಕ್ಕು ಪ್ರತಿಯೊಬ್ಬ ಅರ್ಹ ನಾಗರಿಕನ ಮೂಲಭೂತ ಪ್ರಜಾಸತ್ತಾತ್ಮಕ ಹಕ್ಕಾಗಿದೆ. ಪರಿಷ್ಕರಣೆ ನೆಪದಲ್ಲಿ ಅರ್ಹ ಮತದಾರರ ಹೆಸರು ಪಟ್ಟಿಯಿಂದ ಹೊರಗುಳಿಯುವ ಪರಿಸ್ಥಿತಿ ನಿರ್ಮಾಣವಾಗಬಾರದು. ಮತದಾರರ ಹಕ್ಕಿನ ರಕ್ಷಣೆಯೇ ಈ ಹೋರಾಟದ ಪ್ರಮುಖ ಉದ್ದೇಶವಾಗಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ಮನವಿ ಮಾಡಿದರು.

ಮತ ಕಾವಲು ಸಮಿತಿ ಮುಖಂಡ ಮಾರೆಪ್ಪ ಹರವಿ ಮಾತನಾಡಿ, ಎಸ್‌ಐಆರ್ ಕುರಿತು ಮೇ 4ರಿಂದಲೇ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಕಾರ್ಯ ನಡೆಸಲಾಗುತ್ತಿದೆ. ಅರ್ಹ ಮತದಾರರ ಹೆಸರು ಕೈಬೀಳಬಹುದು ಎಂಬ ಆತಂಕ ವಿವಿಧೆಡೆ ವ್ಯಕ್ತವಾಗುತ್ತಿದೆ. ಚುನಾವಣಾ ಪ್ರಕ್ರಿಯೆಯ ಮೇಲಿನ ಜನರ ವಿಶ್ವಾಸವನ್ನು ಕಾಪಾಡಬೇಕಾದರೆ 2ನೇ ಪುಟಕ್ಕೆ

## ಗ್ರಾಮೀಣ ಜನರಿಗೆ ಗುಣಮಟ್ಟದ ಆರೋಗ್ಯ ಸೇವೆ ತಲುಪಿಸುವುದು ಆದ್ಯತೆ: ಬಸನಗೌಡ ದದ್ದಲ್

ರಾಯಚೂರು: ಗ್ರಾಮೀಣ ಪ್ರದೇಶದ ಜನರಿಗೆ ಸಮಯೋಚಿತ, ಗುಣಮಟ್ಟದ ಹಾಗೂ ಮಾನವೀಯ ಆರೋಗ್ಯ ಸೇವೆ ದೊರೆಯಬೇಕು ಎಂಬುದು ಸರ್ಕಾರ ಮತ್ತು ಜನಪ್ರತಿನಿಧಿಗಳ ಪ್ರಮುಖ ಜವಾಬ್ದಾರಿಯಾಗಿದೆ ಎಂದು ರಾಯಚೂರು ಗ್ರಾಮೀಣ ಕ್ಷೇತ್ರದ ಶಾಸಕ ಬಸನಗೌಡ ದದ್ದಲ್ ಹೇಳಿದರು.




ಮಟಮಾರಿ ಗ್ರಾಮದ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿದ ಅವರು, ಆಸ್ಪತ್ರೆಯ ಕಾರ್ಯನಿರ್ವಹಣೆ, ರೋಗಿಗಳಿಗೆ ನೀಡಲಾಗುತ್ತಿರುವ ಚಿಕಿತ್ಸೆ ಹಾಗೂ ಲಭ್ಯವಿರುವ ಆರೋಗ್ಯ ಸೌಲಭ್ಯಗಳ ಕುರಿತು ಪರಿಶೀಲನೆ ನಡೆಸಿದರು.

ಬಳಿಕ ವೈದ್ಯರು ಮತ್ತು ಆರೋಗ್ಯ ಸಿಬ್ಬಂದಿಯೊಂದಿಗೆ ಸಭೆ ನಡೆಸಿ, ರೋಗಿಗಳ ಚಿಕಿತ್ಸೆಗೆ ಮೊದಲ ಆದ್ಯತೆ ನೀಡಬೇಕು. ತುರ್ತು ಸಂದರ್ಭಗಳಲ್ಲಿ ವಿಳಂಬವಿಲ್ಲದೆ ಸ್ಪಂದಿಸಬೇಕು. ಆರೋಗ್ಯ ಕೇಂದ್ರಕ್ಕೆ ಬರುವ ಪ್ರತಿಯೊಬ್ಬ ರೋಗಿಯೊಂದಿಗೆ ಮಾನವೀಯವಾಗಿ ವರ್ತಿಸಿ, ಅಗತ್ಯ ಚಿಕಿತ್ಸೆ ಮತ್ತು ಮಾರ್ಗದರ್ಶನ ನೀಡಬೇಕು ಎಂದು ಸೂಚಿಸಿದರು.

ಆರೋಗ್ಯ ಕೇಂದ್ರಕ್ಕೆ ನೂತನವಾಗಿ ಒದಗಿಸಲಾದ ಆಂಬ್ಯುಲೆನ್ಸ್‌ನನ್ನೂ ಪರಿಶೀಲಿಸಿದ ಶಾಸಕರು, ತುರ್ತು ಪರಿಸ್ಥಿತಿಯಲ್ಲಿ ರೋಗಿಗಳನ್ನು ತ್ವರಿತವಾಗಿ ಆಸ್ಪತ್ರೆಗೆ ಸಾಗಿಸಲು ಈ ಸೌಲಭ್ಯ ಮಹತ್ವದ ಪಾತ್ರ ವಹಿಸಲಿದೆ. ಮಟಮಾರಿ ಮಾತ್ರವಲ್ಲದೆ ಸುತ್ತಮುತ್ತಲಿನ ಗ್ರಾಮಗಳ ಜನರಿಗೂ ಇದರ ಪ್ರಯೋಜನ ದೊರೆಯಬೇಕು ಎಂದು ಹೇಳಿದರು.

ಗ್ರಾಮೀಣ ಭಾಗದ ಜನರು ಸಣ್ಣ ಆರೋಗ್ಯ ಸಮಸ್ಯೆಗಳಿಗೂ ದೂರದ ನಗರಗಳಿಗೆ ತೆರಳಬೇಕಾದ ಪರಿಸ್ಥಿತಿ ಎದುರಾಗಬಾರದು. ಸ್ಥಳೀಯ ಆರೋಗ್ಯ ಕೇಂದ್ರಗಳಲ್ಲೇ ಅಗತ್ಯ ಚಿಕಿತ್ಸಾ ಸೌಲಭ್ಯಗಳು, ವೈದ್ಯಕೀಯ ಸಿಬ್ಬಂದಿ ಹಾಗೂ ಮೂಲಸೌಕರ್ಯಗಳು 2ನೇ ಪುಟಕ್ಕೆ

## ಮಡಿವಾಳ ಸಂಘದ ಜಿಲ್ಲಾಧ್ಯಕ್ಷರಾಗಿ ಯು. ಆಂಜನೇಯ ಆಯ್ಕೆ: ನಂಜಪ್ಪ ಸ್ಪಷ್ಟನೆ

ರಾಯಚೂರು: ಕರ್ನಾಟಕ ಮಡಿವಾಳ ಸಂಘದ ರಾಯಚೂರು ಜಿಲ್ಲಾಧ್ಯಕ್ಷರಾಗಿ ಯು. ಆಂಜನೇಯ ಅವರನ್ನು ಅಧಿಕೃತವಾಗಿ ಆಯ್ಕೆ ಮಾಡಲಾಗಿದೆ ಎಂದು ಮಡಿವಾಳ ಮಾಚಿದೇವ ನಿಗಮದ ಅಧ್ಯಕ್ಷ ಹಾಗೂ ಕರ್ನಾಟಕ ಮಡಿವಾಳ ಸಂಘದ ರಾಜ್ಯಾಧ್ಯಕ್ಷ ನಂಜಪ್ಪ ತಿಳಿಸಿದರು.



ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕ ಮಡಿವಾಳ ಸಂಘವು 1933ರಿಂದ ನೋಂದಾಯಿತ ಸಂಘವಾಗಿದ್ದು, ರಾಜ್ಯ ಸಂಘದ ಮಾರ್ಗದರ್ಶನದಲ್ಲಿ ಜಿಲ್ಲಾಮಟ್ಟದ ಘಟಕಗಳು ಕಾರ್ಯನಿರ್ವಹಿಸುತ್ತಿವೆ. ಜಿಲ್ಲೆಯ ವಿವಿಧ ತಾಲೂಕು ಘಟಕಗಳ ಅಧ್ಯಕ್ಷರ ಬಹುಮತದ ಅಭಿಪ್ರಾಯದ ಆಧಾರದ ಮೇಲೆ ಜಿಲ್ಲಾಧ್ಯಕ್ಷರನ್ನು ಆಯ್ಕೆ ಮಾಡಲಾಗುತ್ತದೆ. ಬಳಿಕ ರಾಜ್ಯಾಧ್ಯಕ್ಷರು ಹಾಗೂ ರಾಜ್ಯ ಸಮಿತಿ ಅಧಿಕೃತವಾಗಿ ಆಯ್ಕೆಯನ್ನು ಘೋಷಿಸುತ್ತಾರೆ ಎಂದು ವಿವರಿಸಿದರು.

ರಾಯಚೂರು ಜಿಲ್ಲಾ ಘಟಕದ ಹಿಂದಿನ ಅಧ್ಯಕ್ಷ ಜಂಬಣ್ಣ ಅವರ ಅವಧಿ ಪೂರ್ಣಗೊಂಡಿರುವ ಹಿನ್ನೆಲೆಯಲ್ಲಿ ಹೊಸ ಅಧ್ಯಕ್ಷರ ಆಯ್ಕೆ ಪ್ರಕ್ರಿಯೆ ನಡೆಸಲಾಗಿದ್ದು, ಅದರಂತೆ ಯು. ಆಂಜನೇಯ ಅವರನ್ನು ಜಿಲ್ಲಾಧ್ಯಕ್ಷರಾಗಿ ನೇಮಕ ಮಾಡಲಾಗಿದೆ. ಈ ವಿಷಯದಲ್ಲಿ ಯಾವುದೇ ಅನುಮಾನ ಅಥವಾ ಗೊಂದಲಕ್ಕೆ ಅವಕಾಶವಿಲ್ಲ ಎಂದು ಹೇಳಿದರು.

ಇತ್ತೀಚೆಗೆ ಜಿಲ್ಲೆಯಲ್ಲಿ ಸಂಘದ ನಾಯಕತ್ವಕ್ಕೆ ಸಂಬಂಧಿಸಿದಂತೆ ಕೆಲವು ಭಿನ್ನಾಭಿಪ್ರಾಯಗಳು ಉಂಟಾಗಿರುವ ಹಿನ್ನೆಲೆಯಲ್ಲಿ ಎಲ್ಲರೊಂದಿಗೆ ಚರ್ಚಿಸಿ ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವ ಉದ್ದೇಶದಿಂದ ರಾಯಚೂರಿಗೆ ಆಗಮಿಸಿದ್ದೇನೆ. ಹಿಂದಿನ ಅಧ್ಯಕ್ಷ ಜಂಬಣ್ಣ ಅವರೊಂದಿಗೂ ಮಾತುಕತೆ ನಡೆಸಿ, ಸಮಾಜದ ಎಲ್ಲ ಮುಖಂಡರನ್ನು ಒಂದೇ ವೇದಿಕೆಗೆ ತರಲು ಪ್ರಯತ್ನಿಸಲಾಗುವುದು ಎಂದರು.

ಹಿಂದಿನ ಅಧ್ಯಕ್ಷರು ಸಮಾಜದ ಅಭಿವೃದ್ಧಿಗಾಗಿ ಹಲವು ಕೆಲಸಗಳನ್ನು ಮಾಡಿದ್ದಾರೆ. ನೂತನ ಅಧ್ಯಕ್ಷರೂ ಅದೇ ದಾರಿಯಲ್ಲಿ ಸಮಾಜದ ಹಿತಾಸಕ್ತಿಗೆ ಆದ್ಯತೆ ನೀಡಿ ಕಾರ್ಯನಿರ್ವಹಿಸಬೇಕು. ವೈಯಕ್ತಿಕ ಭಿನ್ನಾಭಿಪ್ರಾಯಗಳನ್ನು ಬದಿಗಿಟ್ಟು ಸಮಾಜದ ಅಭಿವೃದ್ಧಿಗಾಗಿ ಎಲ್ಲರೂ ಒಗ್ಗಟ್ಟಿನಿಂದ ಕೆಲಸ ಮಾಡಬೇಕು ಎಂದು ಕರೆ ನೀಡಿದರು.

ಸಂಘದಲ್ಲಿ 2ನೇ ಪುಟಕ್ಕೆ

## ಸರ್ಕಾರಿ ಶಾಲೆಗಳ ಉಳಿವಿಗಾಗಿ ನ.26ರಂದು ಬೆಂಗಳೂರಿನಲ್ಲಿ ಮಹಿಳೆಯರ ಪ್ರತಿಭಟನೆ

ರಾಯಚೂರು: ಸಂವಿಧಾನದ ಆಶಯದಂತೆ ಪ್ರತಿಯೊಬ್ಬ ಮಗುವಿಗೂ ಸಮಾನ ಹಾಗೂ ಗುಣಮಟ್ಟದ ಶಿಕ್ಷಣ ದೊರೆಯಬೇಕು. ಆದರೆ ರಾಜ್ಯ ಸರ್ಕಾರ ಶಾಲೆಗಳ ವಿಲೀನದ ಹೆಸರಿನಲ್ಲಿ ಸರ್ಕಾರಿ ಶಾಲೆಗಳನ್ನು ಮುಚ್ಚಲು ಮುಂದಾಗುತ್ತಿದ್ದು, ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡದೆ ಗುಣಮಟ್ಟದ ಶಿಕ್ಷಣ ನೀಡುವುದಾಗಿ ಹೇಳುತ್ತಿರುವುದು ಶಿಕ್ಷಣ ವಿರೋಧಿ ನೀತಿಯಾಗಿದೆ ಎಂದು ವಿದ್ಯಾ ಆರೋಪಿಸಿದರು.



ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸರ್ಕಾರದ ಶಿಕ್ಷಣ ನೀತಿಯನ್ನು ಖಂಡಿಸಿ ಹಾಗೂ ಸರ್ಕಾರಿ ಶಾಲೆಗಳ ಬಲವರ್ಧನೆ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ನ.26ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಮಹಿಳೆಯರು ಪ್ರತಿಭಟನೆ ನಡೆಸಲು ನಿರ್ಧರಿಸಿದ್ದಾರೆ ಎಂದು ತಿಳಿಸಿದರು.

ಶಿಕ್ಷಣ ಹಕ್ಕು ಕಾಯ್ದೆಯಡಿ ಮಕ್ಕಳಿಗೆ ಗುಣಾತ್ಮಕ ಶಿಕ್ಷಣ ಕಲ್ಪಿಸಬೇಕೆಂದು ಹಲವು ಹಂತಗಳಲ್ಲಿ ಹೋರಾಟ ನಡೆಸಲಾಗಿದೆ. ಕಳೆದ 10 ವರ್ಷಗಳಿಂದ ತಮ್ಮ ವೇದಿಕೆ ನಿರಂತರವಾಗಿ ಹೋರಾಟ ನಡೆಸುತ್ತಿದ್ದರೂ ಸರ್ಕಾರದಿಂದ ಭರವಸೆಗಳಷ್ಟೇ ದೊರೆಯುತ್ತಿವೆ. ಸರ್ಕಾರಿ ಶಾಲೆಗಳ ಸಮಸ್ಯೆಗಳ ಪರಿಹಾರಕ್ಕೆ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿಲ್ಲ ಎಂದು ದೂರಿದರು.

ರಾಜ್ಯದಲ್ಲಿ 62,420ಕ್ಕೂ ಹೆಚ್ಚು ಶಿಕ್ಷಕರ ಹುದ್ದೆಗಳು ಖಾಲಿ ಇವೆ. ಅಲ್ಲದೆ, 7,630 ಶಾಲೆಗಳು ಏಕೋಪಾಧ್ಯಾಯ ಶಾಲೆಗಳಾಗಿವೆ. ಹಲವು ಜಿಲ್ಲೆಗಳಲ್ಲಿ ಶಿಕ್ಷಕರೇ ಇಲ್ಲದ ಶಾಲೆಗಳಿದ್ದು, ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕೊಂದರಲ್ಲೇ 105 ಶಾಲೆಗಳಲ್ಲಿ ಶಿಕ್ಷಕರ ಕೊರತೆ ಗಂಭೀರವಾಗಿದೆ. ಕಲ್ಯಾಣ ಕರ್ನಾಟಕ ಭಾಗದಲ್ಲಿಯೂ ಸುಮಾರು 26 ಸಾವಿರ ಶಿಕ್ಷಕರ ಹುದ್ದೆಗಳು ಖಾಲಿ ಇರುವುದರಿಂದ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ಒದಗಿಸುವುದು ಹೇಗೆ ಸಾಧ್ಯ ಎಂದು ಪ್ರಶ್ನಿಸಿದರು.

ಸರ್ಕಾರಿ ಶಾಲೆಗಳಲ್ಲಿ ಮುಖ್ಯವಾಗಿ ಬಡ, ದಲಿತ, ಹಿಂದುಳಿದ, ಆದಿವಾಸಿ, ಅಲ್ಪಸಂಖ್ಯಾತ ಸಮುದಾಯದ ಮಕ್ಕಳು ಹಾಗೂ ಬಡ ಕುಟುಂಬಗಳ ಹೆಣ್ಣುಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ವ್ಯಾಸಂಗ ಮಾಡುತ್ತಿದ್ದಾರೆ. ಇಂತಹ ಮಕ್ಕಳ ಶಿಕ್ಷಣದ ಬಗ್ಗೆ ಸರ್ಕಾರ ಹೆಚ್ಚಿನ ಕಾಳಜಿ ವಹಿಸಬೇಕು. ಶಿಕ್ಷಕರ ಕೊರತೆ ಹಾಗೂ ಮೂಲಸೌಕರ್ಯಗಳ ಅಭಾವದಿಂದ ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ದಾಖಲಾತಿ ಕುಸಿಯುವ ಪರಿಸ್ಥಿತಿ ನಿರ್ಮಾಣವಾಗುತ್ತಿದೆ ಎಂದು ಹೇಳಿದರು. 2ನೇ ಪುಟಕ್ಕೆ

## ಎರಡು ದಿನಗಳ ರಾಷ್ಟ್ರಿಯ ಸಮ್ಮೇಳನ

ರಾಯಚೂರು ಅ. 06 (ಕರ್ನಾಟಕ ವಾರ್ತೆ):ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯು ಆಹಾರ ಮತ್ತು ನೀರಿನಲ್ಲಿರುವ ಫರ್ ಫ್ಲೋರ್ ಆಲ್ಕೈಲ್ ಪದಾರ್ಥಗಳು ಹಾಗೂ ಮೈಕ್ರೋಪ್ಲಾಸ್ಟಿಕ್‌ಗಳು (Poly-And Perfluoroalkyl Substances and Microplastics

in Food and Water) ಎಂಬ ವಿಷಯದ ಮೇಲೆ 2 ಎರಡು ದಿನಗಳ ಪಾಲುದಾರರ ಸಮಾಲೋಚನಾ ರಾಷ್ಟ್ರೀಯ ಸಮ್ಮೇಳನವನ್ನು ಅಕ್ಟೋಬರ್ 29 ಹಾಗೂ 30ರಂದು ಅಕಾಡೆಮಿಯ ಕಚೇರಿಯಲ್ಲಿ ಆಯೋಜಿಸಲಾಗುತ್ತಿದೆ.

ಈ ಸಮ್ಮೇಳನದಲ್ಲಿ ವಿವಿಧ ಪ್ರತಿಷ್ಠಿತ ಸಂಸ್ಥೆಗಳ ಹೆಸರಾಂತ ವಿಜ್ಞಾನಿಗಳು ತಾಂತ್ರಿಕ ಉಪನ್ಯಾಸಗಳನ್ನು ನೀಡಲಿದ್ದಾರೆ. ಈ ಸಮ್ಮೇಳನದಲ್ಲಿ ಸ್ನಾತಕೋತ್ತರ ವಿಜ್ಞಾನ ವಿದ್ಯಾರ್ಥಿಗಳು, ಸಂಶೋಧನಾ ವಿದ್ಯಾರ್ಥಿಗಳು, ಇಂಜಿನಿಯರಿಗ್ ವಿದ್ಯಾರ್ಥಿಗಳು, ಪ್ರಾಧ್ಯಾಪಕರು, ಯುವ ವಿಜ್ಞಾನಿಗಳು, ಯುವ ಉದ್ಯಮದಾರರು ಭಾಗವಹಿಸಬಹುದಾಗಿದೆ. ಅಲ್ಲದೇ, ಯುವ ವಿಜ್ಞಾನಿಗಳು ಮತ್ತು ಸಂಶೋಧನಾ ವಿದ್ಯಾರ್ಥಿಗಳು ತಮ್ಮ ಸಂಶೋಧನಾ ಪ್ರಬಂಧವನ್ನು(Poster Research Paper) ಸಹ ಮಂಡಿಸಲು ಅವಕಾಶ ಕಲ್ಪಿಸಲಾಗಿದ್ದು, ಆಯ್ಕೆಯಾದ ಸಂಶೋಧನಾ ಪ್ರಬಂಧಕ್ಕೆ ನಗದು ಬಹುಮಾನವನ್ನು ನೀಡಲಾಗುವುದು. ಆಸಕ್ತರು ದಿನಾಂಕ: 20/10/2026ರಳೊಗಾಗಿ (Registration Link) https://forms.gle/G8jzPbRczYY5jYXWA) ಮೂಲಕ ನೋಂದಾಯಿಸಿಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಅಕಾಡೆಮಿಯ ಅಧಿಕಾರಿಗಳನ್ನು (ಮೊ: 9620767819 9743084194) ಸಂಪರ್ಕಿಸಬಹುದಾಗಿದೆ ಅಥವಾ ಅಕಾಡೆಮಿಯ ವೆಬ್ ಸೈಟ್ https://kstacademy.in ವೀಕ್ಷಿಸಬಹುದಾಗಿದೆ.

ರಾಷ್ಟ್ರಿಯ ಸಮ್ಮೇಳನದ ಸದುಪಯೋಗವನ್ನು ವಿದ್ಯಾರ್ಥಿಗಳು, ಅಧ್ಯಾಪಕರು ಹಾಗೂ ಆಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಡಾ.ಆನಂದ ಆರ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಸತಿಯುತ ಶಾಲೆ, ಕಾಲೇಜುಗಳ ನೋಂದಣಿಗೆ ಆನ್‌ಲೈನ್ ಅರ್ಜಿ ಆಹ್ವಾನ

ರಾಯಚೂರು ಅ. 06 (ಕರ್ನಾಟಕ ವಾರ್ತೆ): ರಾಯಚೂರು ಜಿಲ್ಲೆಯ 6 ರಿಂದ 18 ವರ್ಷದೊಳಗಿನ ಮಕ್ಕಳಿಗಾಗಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರೇತರ ವಸತಿ ನಿಲಯಗಳ ವಸತಿಯುತ ಶಾಲೆ/ಕಾಲೇಜುಗಳ ನೋಂದಣಿ ಕುರಿತು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಬಾಲ ನ್ಯಾಯ ಕಾಯ್ದೆಯನ್ವಯ ನೋಂದಣಿಯಾಗಿರುವ ಸಂಸ್ಥೆಗಳನ್ನು/ ವಸತಿ ನಿಲಯಗಳನ್ನು ಹೊರತುಪಡಿಸಿ 6 ರಿಂದ 18 ವರ್ಷದೊಳಗಿನ ಮಕ್ಕಳಿಗಾಗಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಸರ್ಕಾರೇತರ ಸಂಸ್ಥೆಗಳು/ನಾಗರೀಕ ಸಮಾಜ ಸಂಸ್ಥೆಗಳು/ ಟ್ರಸ್ಟ್/ ಧಾರ್ಮಿಕ/ ಖಾಸಗಿ/ ವೈಯಕ್ತಿಕವಾಗಿ ನಡೆಸಲ್ಪಡುವ ಯಾವುದೇ ಔಪಚಾರಿಕ/ ಅನೌಪಚಾರಿಕ ಶೈಕ್ಷಣಿಕ ವಸತಿ ನಿಲಯಗಳನ್ನು ವಸತಿ ಶಾಲೆ/ಕಾಲೇಜುಗಳನ್ನು ನೊಂದಾಯಿಸಲು ಕಡ್ಡಾಯವಾಗಿ ನಿರ್ವಹಿಸಲು ಕ್ರಮವಹಿಸಬೇಕಾಗಿದ್ದು, ಅರ್ಜಿಯನ್ನು ವೆಬ್‌ಸೈಟ್ ವಿಳಾಸ: https://sevaone.karnataka.gov.in/services/directApply.do?serviceId=2731 ನಲ್ಲಿ ನಿಯಮಾನುಸಾರ ಕಡ್ಡಾಯವಾಗಿ ನೊಂದಾವಣೆ ಮಾಡಿಕೊಂಡು ಮಾರ್ಗಸೂಚಿಯ ನಿಯಮಗಳನ್ವಯ ನಿಲಯಗಳನ್ನು ನಡೆಸದೇ ಇದ್ದಲ್ಲಿ ಅಂತಹ ನಿಲಯಗಳನ್ನು ರದ್ದುಗೊಳಿಸಲು ಕ್ರಮ ಜರುಗಿಸಲಾಗುವುದು.

ಹೆಚ್ಚಿನ ವಿವರಣೆಗಳಿಗಾಗಿ ಜಿಲ್ಲಾ ಉಪನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಮಂತ್ರಾಲಯ ರಸ್ತೆ ಐಡಿಎಸ್ ಎಮ್‌ಟಿ ಲೇಔಟ್ ಮಾವಿನ ಕೆರೆ ಎದುರುಗಡೆ ದೂರವಾಣಿ ಸಂಖ್ಯೆ 08532-226292ಗೆ ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಚೇರಿ ಸ್ಥಳಾಂತರ

ರಾಯಚೂರು ಅ. 06 (ಕರ್ನಾಟಕ ವಾರ್ತೆ): ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ, ಎನ್.ಆರ್.ಬಿ.ಸಿ ಕಾರ್ಯಪಾಲಕ ಅಭಿಯಂತರರು, ವಿಭಾಗ ಸಂಖೆ 6ರ ಚಿಕ್ಕಹೊನ್ನಕುಣಿ ಕಚೇರಿಯನ್ನು ರಾಯಚೂರಿನ ಯರಮರಸ್ ಕೆ.ಐ.ಎ.ಡಿ.ಬಿ. ವಸತಿ ಬಡಾವಣೆಗೆ ಸ್ಥಳಾಂತರಿಸಲಾಗಿದೆ.

ಸದರಿ ಕಚೇರಿಗೆ ಸಂಬಧಿಸಿದ ಎಲ್ಲಾ ಪತ್ರ ವ್ಯವಹಾರಗಳನ್ನು ಕಾರ್ಯನಿರ್ವಾಹಕ ಅಭಿಯಂತರರು, ಕೃಭಾಜನಿನಿ, ನಾಬದಂಕಾ, ವಿಭಾಗ ಸಂ-6, ಕೆ.ಐ.ಎ.ಡಿ.ಬಿ ವಸತಿ ಬಡಾವಣೆ, ಯರಮರಸ್-584134 ತಾ ರಾಯಚೂರು ಜಿ ರಾಯಚೂರು ಇಲ್ಲಿಗೆ ಮಾಡಬಹುದಾಗಿದೆ ಎಂದು ಕೃಭಾಜನಿನಿ, ನಾಬದಂಕಾ, ವಿಭಾಗ ಸಂ-6ರ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಮೃತ ವಾಣಿ
ನೊಂದವನು ಶಾಪ ಹಾಕಬೇಕಿಲ್ಲ
ಪಾಪ ತಾನಾಗಿಯೇ
ಸುತ್ತಿಕೊಳ್ಳುತ್ತದೆ.

1608 ನೇಯ ದಿನಕ್ಕೆ
ಏಮ್ಸ್
ಹೋರಾಟ

## ಆನೆಕಾಲು ರೋಗ ಪತ್ತೆಗೆ ರಾತ್ರಿವೇಳೆ ರಕ್ತಲೇಪನ ಪರೀಕ್ಷೆಗೆ ಸಹಕರಿಸಿ: ಡಾ. ಸಂಗಮೇಶ್



ಕಲ್ಲೂರು, ಅ.6: ಸೊಳ್ಳೆಗಳ ಮೂಲಕ ಹರಡುವ ಆನೆಕಾಲು ರೋಗವನ್ನು ಆರಂಭಿಕ ಹಂತದಲ್ಲೇ ಪತ್ತೆಹಚ್ಚಿ ನಿಯಂತ್ರಿಸಲು ಆರೋಗ್ಯ ಇಲಾಖೆ ನಡೆಸುತ್ತಿರುವ ರಾತ್ರಿವೇಳೆಯ ರಕ್ತಲೇಪನ ಪರೀಕ್ಷೆಗೆ ಸಾರ್ವಜನಿಕರು ಸಹಕಾರ ನೀಡಬೇಕು ಎಂದು ಕಲ್ಲೂರು ಪ್ರಾಥಮಿಕ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ. ಸಂಗಮೇಶ್ ಮನವಿ ಮಾಡಿದರು.

ರಾಯಚೂರು ತಾಲೂಕಿನ ಕಲ್ಲೂರು ಪ್ರಾಥಮಿಕ ಆರೋಗ್ಯ ಕೇಂದ್ರ ವ್ಯಾಪ್ತಿಯ ನೀರಮಾನವಿ ಕ್ರಾಸ್ ಬಳಿ ರಾತ್ರಿ ವೇಳೆ ಹಮ್ಮಿಕೊಂಡಿದ್ದ ರಕ್ತಲೇಪನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕ್ಯೂಲೆಕ್ಸ್ ಸೊಳ್ಳೆಗಳ ಮೂಲಕ ಆನೆಕಾಲು ರೋಗ ಹರಡುವ ಸಾಧ್ಯತೆ ಇದ್ದು, ಸೋಂಕಿತ ವ್ಯಕ್ತಿಯನ್ನು ಕಚ್ಚಿದ ಸೊಳ್ಳೆ ಮತ್ತೊಬ್ಬರನ್ನು ಕಚ್ಚಿದಾಗ ರೋಗಕಾರಕ ಪರಾವಲಂಬಿಗಳು ದೇಹಕ್ಕೆ ಪ್ರವೇಶಿಸಬಹುದು. ಅವು ರಕ್ತ ಹಾಗೂ ದುಗ್ಧರಸ ನಾಳಗಳಲ್ಲಿ ಬೆಳೆಯುವುದರಿಂದ ಕ್ರಮೇಣ ಕೈ-ಕಾಲು ಸೇರಿದಂತೆ ದೇಹದ ಕೆಲವು ಭಾಗಗಳಲ್ಲಿ ಊತ ಉಂಟಾಗಬಹುದು ಎಂದು ತಿಳಿಸಿದರು.

ಆನೆಕಾಲು ರೋಗದ ಲಕ್ಷಣಗಳು ತಕ್ಷಣ ಕಾಣಿಸಿಕೊಳ್ಳದೇ ದೀರ್ಘಕಾಲದ ಬಳಿಕ ಗೋಚರಿಸುವ ಸಾಧ್ಯತೆ ಇದೆ. ಆರಂಭದಲ್ಲಿ ಜ್ವರ, ಚಳಿ, ಚರ್ಮದ ಸೋಂಕು ಮತ್ತು ಊತ ಕಾಣಿಸಿಕೊಂಡು, ಮುಂದಿನ ಹಂತಗಳಲ್ಲಿ ಚರ್ಮ ದಪ್ಪವಾಗುವುದು ಹಾಗೂ ನಡೆಯಲು ತೊಂದರೆಯಾಗುವಂತಹ ಸಮಸ್ಯೆಗಳು ಎದುರಾಗಬಹುದು. ಆದ್ದರಿಂದ ಆರಂಭದಲ್ಲೇ ರೋಗ ಪತ್ತೆಹಚ್ಚುವುದು ಅತ್ಯಂತ ಮುಖ್ಯ ಎಂದು ಹೇಳಿದರು.

ಜಿಲ್ಲಾ ಆರೋಗ್ಯ ಇಲಾಖೆಯ ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಆಯ್ದ ಗ್ರಾಮಗಳಲ್ಲಿ ರಾತ್ರಿ ರಕ್ತಲೇಪನ ಪರೀಕ್ಷೆ ನಡೆಸಲಾಗುತ್ತಿದೆ. ಸಾರ್ವಜನಿಕರು ಪರೀಕ್ಷೆಗೆ ಹಿಂಜರಿಯದೆ ಸಹಕರಿಸಬೇಕು ಎಂದು ಮನವಿ ಮಾಡಿದರು.

ಮನೆಯ ಸುತ್ತಮುತ್ತ ನೀರು ನಿಲ್ಲದಂತೆ ನೋಡಿಕೊಳ್ಳುವುದು, ಚರಂಡಿ ಹಾಗೂ ತಿಪ್ಪೆ ಪ್ರದೇಶಗಳನ್ನು ಸ್ವಚ್ಛವಾಗಿಡುವುದು ಮತ್ತು ಮನೆ, ಹೊಲ ಹಾಗೂ ಗದ್ದೆಗಳಲ್ಲಿ ಕೆಲಸ ಮಾಡುವಾಗ ಸೊಳ್ಳೆ ಕಚ್ಚದಂತೆ ಮುನ್ನೆಚ್ಚರಿಕೆ ವಹಿಸಬೇಕು ಎಂದು ಸಲಹೆ ನೀಡಿದರು.

ರಕ್ತಲೇಪನ ಕಾರ್ಯದಲ್ಲಿ ಹಿರಿಯ ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿ ಮಂಜುಳಾ ಶುಕ್ಲಾ, ಆರೋಗ್ಯ ನಿರೀಕ್ಷಣಾಧಿಕಾರಿ ವಿಶ್ವನಾಥ್, ಆಶಾ ಕಾರ್ಯಕರ್ತೆ ಅನುರಾಧಾ, ಅಂಗನವಾಡಿ ಕಾರ್ಯಕರ್ತೆ ಅಮರಮ್ಮ ಹಾಗೂ ಗ್ರಾಮಸ್ಥರು ಪಾಲ್ಗೊಂಡಿದ್ದರು.

## ಸಸಿ ನೆಟ್ಟು ಅರ್ಥಪೂರ್ಣವಾಗಿ ಹುಟ್ಟುಹಬ್ಬ ಆಚರಿಸಿದ ಸಚಿನ್ ಖಾನಾಪುರ



ರಾಯಚೂರು: ಯುವ ನಾಯಕ ಸಚಿನ್ ಖಾನಾಪುರ ಅವರು ತಮ್ಮ ಹುಟ್ಟುಹಬ್ಬವನ್ನು ಸಸಿ ನೆಡುವ ಮೂಲಕ ಸಮಾಜಮುಖಿಯಾಗಿ ಆಚರಿಸಿ ಪರಿಸರ ಸಂರಕ್ಷಣೆಯ ಸಂದೇಶ ಸಾರಿದರು.

ನಗರದ ಲಲಿತ ವೃದ್ಧಾಶ್ರಮದ ಆವರಣದಲ್ಲಿ ಹುಟ್ಟುಹಬ್ಬದ ಅಂಗವಾಗಿ ಸಸಿಗಳನ್ನು ನೆಟ್ಟ ಅವರು, ವೈಯಕ್ತಿಕ ಸಂಭ್ರಮವನ್ನು ಪರಿಸರ ಕಾಳಜಿ ಹಾಗೂ ಸಮಾಜಸೇವೆಯೊಂದಿಗೆ ಬೆಸೆದುಕೊಂಡರು. ಹುಟ್ಟುಹಬ್ಬವನ್ನು ಕೇವಲ ಆಚರಣೆಗೆ ಸೀಮಿತಗೊಳಿಸದೆ, ಮುಂದಿನ ಪೀಳಿಗೆಗೆ ಉಪಯುಕ್ತವಾಗುವ ಕಾರ್ಯದ ಮೂಲಕ ಆಚರಿಸಿರುವುದು ಗಮನ ಸೆಳೆಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಗಣ್ಯರು, ಯುವಕರು ತಮ್ಮ ಜೀವನದ ವಿಶೇಷ ಸಂದರ್ಭಗಳಲ್ಲಿ ಸಮಾಜಕ್ಕೆ ಕೊಡುಗೆ ನೀಡುವಂತಹ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಬೇಕು. ಇಂತಹ ಚಟುವಟಿಕೆಗಳು ಯುವಜನರಲ್ಲಿ ಪರಿಸರ ಹಾಗೂ ಸಾಮಾಜಿಕ ಹೊಣೆಗಾರಿಕೆಯ ಅರಿವು ಮೂಡಿಸಲು ಸಹಕಾರಿಯಾಗುತ್ತವೆ ಎಂದು ಹೇಳಿದರು.

ವೃದ್ಧಾಶ್ರಮದ ಆವರಣದಲ್ಲಿ ಸಸಿ ನೆಡುವ ಮೂಲಕ ಹಸಿರು ವಾತಾವರಣ ನಿರ್ಮಾಣಕ್ಕೆ ಕೈಜೋಡಿಸಿದ ಸಚಿನ್ ಖಾನಾಪುರ ಅವರ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತವಾಯಿತು. ಇದೇ ವೇಳೆ ಅವರಿಗೆ ಜನ್ಮದಿನದ ಶುಭಾಶಯಗಳನ್ನು ತಿಳಿಸಿ, ಮುಂದಿನ ದಿನಗಳಲ್ಲಿಯೂ ಸಮಾಜಮುಖಿ ಚಟುವಟಿಕೆಗಳನ್ನು ಮುಂದುವರಿಸಲಿ ಎಂದು ಹಾರೈಸಲಾಯಿತು.

ಕಾರ್ಯಕ್ರಮವನ್ನು ಜೈ ಭೀಮ್ ಗುಂಜಹಳ್ಳಿ ಹಾಗೂ ಅವರ ಸ್ನೇಹಿತರು ನಿರ್ವಹಿಸಿದರು.

## ಗ್ರಾಮೀಣ ಜನರಿಗೆ ಗುಣಮಟ್ಟದ ಆರೋಗ್ಯ ಸೇವೆ ತಲುಪಿಸುವುದು ಆದ್ಯತೆ: ಬಸನಗೌಡ ದದ್ದಲ್

ಸಮರ್ಪಕವಾಗಿ ಲಭ್ಯವಾಗುವಂತೆ ವ್ಯವಸ್ಥೆಯನ್ನು ಬಲಪಡಿಸುವ ಅಗತ್ಯವಿದೆ ಎಂದರು.

ಮಟಮಾರಿ ಆರೋಗ್ಯ ಕೇಂದ್ರವು ಮುಂದಿನ ದಿನಗಳಲ್ಲಿ ಈ ಭಾಗದ ಜನರಿಗೆ ವಿಶ್ವಾಸಾರ್ಹ ಆರೋಗ್ಯ ಸೇವಾ ಕೇಂದ್ರವಾಗಿ ರೂಪುಗೊಳ್ಳಬೇಕು. ಅಗತ್ಯ ಮೂಲಸೌಕರ್ಯ, ವೈದ್ಯಕೀಯ ಸೌಲಭ್ಯ ಹಾಗೂ ತ್ವರಿತ ಆರೋಗ್ಯ ಸೇವೆ ಒದಗಿಸುವ ನಿಟ್ಟಿನಲ್ಲಿ ಕ್ರಮಗಳನ್ನು ಮುಂದುವರಿಸಲಾಗುವುದು ಎಂದು ಶಾಸಕ ಬಸನಗೌಡ ದದ್ದಲ್ ತಿಳಿಸಿದರು.

## ಮಡಿವಾಳ ಸಂಘದ ಜಿಲ್ಲಾಧ್ಯಕ್ಷರಾಗಿ ಯು. ಆಂಜನೇಯ ಆಯ್ಕೆ: ನಂಜಪ್ಪ ಸ್ಪಷ್ಟನೆ

ಉಂಟಾಗಿರುವ ಗೊಂದಲ ನಿವಾರಣೆಗೆ ಕಲ್ಯಾಣ ಮಂಟಪದಲ್ಲಿ ಸಭೆ ಕರೆಯಲಾಗಿದ್ದು, ಎಲ್ಲಾ ಮುಖಂಡರೊಂದಿಗೆ ಸಮಾಲೋಚನೆ ನಡೆಸಿ ಸಮಸ್ಯೆಗೆ ಅಂತ್ಯ ಹಾಡುವ ಪ್ರಯತ್ನ ಮಾಡಲಾಗುವುದು ಎಂದು ತಿಳಿಸಿದರು.

ಮಡಿವಾಳ ಮಾಚಿದೇವ ನಿಗಮಕ್ಕೆ ಸಿದ್ದರಾಮಯ್ಯ ನೇತೃತ್ವದ ಹಿಂದಿನ ಸರ್ಕಾರದ ಅವಧಿಯಲ್ಲಿ ₹33 ಕೋಟಿ ಅನುದಾನ ನೀಡಲಾಗಿತ್ತು. ಪ್ರಸಕ್ತ ಸಾಲಿನಲ್ಲಿ ₹12 ಕೋಟಿ ಅನುದಾನ ಲಭ್ಯವಾಗಿದೆ. ನಿಗಮದ ಯೋಜನೆಗಳನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಹೆಚ್ಚುವರಿ ಅನುದಾನ ನೀಡುವಂತೆ ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿದೆ ಮತ್ತು ಸರ್ಕಾರದಿಂದ ಸಕಾರಾತ್ಮಕ ಭರವಸೆ ದೊರೆತಿದೆ ಎಂದು ಹೇಳಿದರು.

ಎಂಎಲ್‌ಸಿ ರಘು ಅವರ ಹೇಳಿಕೆ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ನಂಜಪ್ಪ, ಅವರು ನೀಡಿರುವ ಹೇಳಿಕೆ ಎಲ್ಲ ನಿಗಮಗಳಿಗೆ ಸಂಬಂಧಿಸಿದ ಸಾಮಾನ್ಯ ಅಭಿಪ್ರಾಯವಾಗಿರಬಹುದು. ಮಡಿವಾಳ ಮಾಚಿದೇವ ನಿಗಮವನ್ನು ಉದ್ದೇಶಿಸಿ ಅವರು ಅಧಿಕೃತವಾಗಿ ಪ್ರತ್ಯೇಕ ಹೇಳಿಕೆ ನೀಡಿದ್ದಾರೆ ಎಂಬ ಮಾಹಿತಿ ತಮ್ಮ ಗಮನಕ್ಕೆ ಬಂದಿಲ್ಲ ಎಂದು ಸ್ಪಷ್ಟಪಡಿಸಿದರು.

ಸುದ್ದಿಗೋಷ್ಠಿಯಲ್ಲಿ ದಿಗಂಬರ್, ಪದ್ಮ, ವೆಂಕಟರಾಮ್, ವೆಂಕಟೇಶ್, ಯು. ಆಂಜನೇಯ, ವಿರೂಪಾಕ್ಷಿ, ಪರಶುರಾಮ, ಶಿವಮೂರ್ತಿ ಸೇರಿದಂತೆ ಮಡಿವಾಳ ಸಮಾಜದ ಹಲವು ಮುಖಂಡರು ಉಪಸ್ಥಿತರಿದ್ದರು.

## ಸರ್ಕಾರಿ ಶಾಲೆಗಳ ಉಳಿವಿಗಾಗಿ ನ.26ರಂದು ಬೆಂಗಳೂರಿನಲ್ಲಿ ಮಹಿಳೆಯರ ಪ್ರತಿಭಟನೆ

ಶಿಕ್ಷಣ ಹಕ್ಕು ಕಾಯ್ದೆಯ ನಿಯಮದಂತೆ 1ರಿಂದ 5ನೇ ತರಗತಿಯ ಮಕ್ಕಳಿಗೆ ನೆರೆಹೊರೆಯಲ್ಲಿ ಶಾಲೆ ಹಾಗೂ 6ರಿಂದ 8ನೇ ತರಗತಿಯ ಮಕ್ಕಳಿಗೆ ನಿಗದಿತ ಅಂತರದೊಳಗೆ ಶಾಲೆ ಲಭ್ಯವಾಗುವಂತೆ ಸರ್ಕಾರ ಕ್ರಮ ಕೈಗೊಳ್ಳಬೇಕು. ಶಾಲೆಗಳ ವಿಲೀನ ಅಥವಾ ಮುಚ್ಚುವಿಕೆಯ ಸಂದರ್ಭದಲ್ಲಿ ಈ ನಿಯಮಗಳನ್ನು ಉಲ್ಲಂಘಿಸಬಾರದು ಎಂದು ಆಗ್ರಹಿಸಿದರು.

ಶಿಕ್ಷಣ ಹಕ್ಕು ಕಾಯ್ದೆ ಜಾರಿಯಾದ ನಂತರವೂ ಅನೇಕ ಸರ್ಕಾರಿ ಶಾಲೆಗಳಲ್ಲಿ ಶುದ್ಧ ಕುಡಿಯುವ ನೀರು, ಶೌಚಾಲಯ, ಆಟದ ಮೈದಾನ, ಗ್ರಂಥಾಲಯ ಸೇರಿದಂತೆ ಅಗತ್ಯ ಮೂಲಸೌಕರ್ಯಗಳ ಕೊರತೆ ಮುಂದುವರಿದಿದೆ. ವಿದ್ಯಾರ್ಥಿಗಳ ಕಲಿಕಾ ಗುಣಮಟ್ಟ ಸುಧಾರಿಸಲು ಮೊದಲು ಶಿಕ್ಷಕರ ಖಾಲಿ ಹುದ್ದೆಗಳನ್ನು ಭರ್ತಿ ಮಾಡಿ, ತರಗತಿವಾರು ಹಾಗೂ ವಿಷಯವಾರು ಶಿಕ್ಷಕರನ್ನು ನೇಮಕ ಮಾಡಬೇಕು ಎಂದು ಒತ್ತಾಯಿಸಿದರು.

ಎಸ್‌ಎಸ್‌ಎಲ್‌ಸಿ ಫಲಿತಾಂಶ ಹೆಚ್ಚಿಸುವ ಉದ್ದೇಶದಿಂದ ಅಂಕಗಳಿಗೆ ಸಂಬಂಧಿಸಿದ ಮಾನದಂಡಗಳಲ್ಲಿ ಸಡಿಲಿಕೆ ಮಾಡುವುದಕ್ಕಿಂತ ಪ್ರಾಥಮಿಕ ಹಂತದಿಂದಲೇ ಶಿಕ್ಷಣದ ಗುಣಮಟ್ಟ ಹೆಚ್ಚಿಸಲು ಸರ್ಕಾರ ಆದ್ಯತೆ ನೀಡಬೇಕು. ಶಿಕ್ಷಕರ ನೇಮಕ ಹಾಗೂ ಶಾಲೆಗಳ ಮೂಲಸೌಕರ್ಯ ಸುಧಾರಣೆಯೇ ಇದಕ್ಕೆ ಶಾಶ್ವತ ಪರಿಹಾರ ಎಂದರು.

ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ತಕ್ಷಣ ಭರ್ತಿ ಮಾಡಬೇಕು, ಶಾಲೆಗಳಿಗೆ ಶುದ್ಧ ಕುಡಿಯುವ ನೀರು, ಶೌಚಾಲಯ, ಆಟದ ಮೈದಾನ ಹಾಗೂ ಗ್ರಂಥಾಲಯ ಸೌಲಭ್ಯ ಕಲ್ಪಿಸಬೇಕು, ಪ್ರತಿ ಶಾಲೆಗೆ ಒಬ್ಬ ಪರಿಚಾರಕರನ್ನು ನೇಮಿಸಬೇಕು, ಶಿಕ್ಷಣ ಹಕ್ಕು ಕಾಯ್ದೆಯ ನೆರೆಹೊರೆ ಶಾಲೆ ನಿಯಮವನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಹಾಗೂ ಕೆಪಿಎಸ್/ಮ್ಯಾಗ್ನೆಟ್ ಶಾಲೆಗಳ ಹೆಸರಿನಲ್ಲಿ ಸರ್ಕಾರಿ ಶಾಲೆಗಳ ವಿಲೀನಕ್ಕೆ ಮುಂದಾಗಬಾರದು ಎಂದು ಆಗ್ರಹಿಸಿದರು.

ಅಲ್ಲದೆ, ರಾಜ್ಯದಲ್ಲಿ ಆರ್‌ಟಿಇ ಎಷ್ಟರ ಮಟ್ಟಿಗೆ ಸಮರ್ಪಕವಾಗಿ ಅನುಷ್ಠಾನಗೊಂಡಿದೆ ಎಂಬುದನ್ನು ಪರಿಶೀಲಿಸಲು ಶಿಕ್ಷಣ ತಜ್ಞರ ರಾಜ್ಯಮಟ್ಟದ ಸಮಿತಿ ರಚಿಸಿ ಶ್ವೇತಪತ್ರ ಹೊರಡಿಸಬೇಕು. ಸರ್ಕಾರ ತಮ್ಮ ಬೇಡಿಕೆಗಳನ್ನು ಗಂಭೀರವಾಗಿ ಪರಿಗಣಿಸಿ ಬಡ ಹಾಗೂ ಹಿಂದುಳಿದ ಸಮುದಾಯಗಳ ಮಕ್ಕಳಿಗೆ ಗುಣಮಟ್ಟದ ಶಿಕ್ಷಣವನ್ನು ಖಾತ್ರಿಪಡಿಸಬೇಕು ಎಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾಂತೇಶ, ಮಲ್ಲೇಶ್, ಸ್ವಪ್ನ ದೀಪ, ಶೈನಜ್, ಹಫೀಜ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಮೊದಲನೇ ಪುಟದಿಂದ

## 9 ಗಂಟೆಗಳ ಧರಣಿ ಬಳಿಕ ರಾಹುಲ್, ಪ್ರಿಯಾಂಕಾ ಪೊಲೀಸ್ ವಶಕ್ಕೆ

ಪಕ್ಷದಿಂದ ಅಧಿಕೃತ ಸಭೆಯ ಮನವಿ ಬಂದಿರಲಿಲ್ಲ ಎಂದು ಚುನಾವಣಾ ಆಯೋಗ ಸ್ಪಷ್ಟಪಡಿಸಿದೆ. ಬಳಿಕ ದೊಡ್ಡ ಸಂಖ್ಯೆಯ ಸಂಸದರು ಭೇಟಿ ಮಾಡಲು ಬಯಸಿರುವ ಮಾಹಿತಿ ಬಂದಿದ್ದು, ಸಭೆ ನಡೆಸುವ ವಿಧಾನಕ್ಕೆ ಸಂಬಂಧಿಸಿದಂತೆ ನಿಗದಿತ ಪ್ರಕ್ರಿಯೆ ಅನುಸರಿಸಬೇಕೆಂದು ಆಯೋಗ ತಿಳಿಸಿದೆ.

ಎಸ್‌ಐಆರ್ ಪ್ರಕ್ರಿಯೆಯನ್ನು ಹಿಂಪಡೆಯಬೇಕು, ಮತದಾರರ ಹಕ್ಕುಗಳನ್ನು ರಕ್ಷಿಸಬೇಕು ಹಾಗೂ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ರಾಜೀನಾಮೆ ನೀಡಬೇಕು ಎಂಬ ಬೇಡಿಕೆಗಳನ್ನು ಮುಂದಿಟ್ಟುಕೊಂಡು INDIA ಒಕ್ಕೂಟದ ನಾಯಕರು ಪ್ರತಿಭಟನೆ ನಡೆಸಿದರು.

## ಎಸ್‌ಐಆರ್ ರದ್ದುಪಡಿಸಿ, ಮುಖ್ಯ ಚುನಾವಣಾ ಆಯುಕ್ತರ ರಾಜೀನಾಮೆಗೆ INDIA ಒಕ್ಕೂಟ ಆಗ್ರಹ

ಎಂದು ಒತ್ತಾಯಿಸಿದರು.

ಪ್ರತಿಭಟನಾಕಾರರು ''ಎಸ್‌ಐಆರ್ ಪ್ರಕ್ರಿಯೆ ರದ್ದುಪಡಿಸಿ'', ''ಮತದಾರರ ಹಕ್ಕುಗಳನ್ನು ರಕ್ಷಿಸಿ'' ಹಾಗೂ ''ಮುಖ್ಯ ಚುನಾವಣಾ ಆಯುಕ್ತರು ರಾಜೀನಾಮೆ ನೀಡಲಿ'' ಎಂಬ ಬೇಡಿಕೆಗಳನ್ನು ಮುಂದಿಟ್ಟರು.

ರಾಹುಲ್ ಗಾಂಧಿ ಸೇರಿದಂತೆ INDIA ಒಕ್ಕೂಟದ ನಾಯಕರು ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ರಾಜೀನಾಮೆಗೆ ಆಗ್ರಹಿಸಿದರು. ಚುನಾವಣಾ ಪ್ರಕ್ರಿಯೆಯ ಮೇಲಿನ ಸಾರ್ವಜನಿಕ ವಿಶ್ವಾಸ ಕಾಪಾಡುವುದು ಅತ್ಯಂತ ಮುಖ್ಯವಾಗಿದ್ದು, ಅರ್ಹ ಮತದಾರರ ಮತದಾನದ ಹಕ್ಕಿಗೆ ಯಾವುದೇ ರೀತಿಯ ಧಕ್ಕೆಯಾಗದಂತೆ ಚುನಾವಣಾ ಆಯೋಗ ಕ್ರಮ ಕೈಗೊಳ್ಳಬೇಕು ಎಂದು ಅವರು ಒತ್ತಾಯಿಸಿದರು.

ಎಸ್‌ಐರ್ಆ ಪ್ರಕ್ರಿಯೆಯ ಕುರಿತು ಪಾರದರ್ಶಕತೆ ಕಾಪಾಡಿ, ಮತದಾರರ ಪಟ್ಟಿಯಲ್ಲಿ ಯಾವುದೇ ಅರ್ಹ ನಾಗರಿಕರ ಹೆಸರು ಅನ್ಯಾಯವಾಗಿ ಕೈಬಿಡದಂತೆ ಖಚಿತಪಡಿಸಬೇಕು ಎಂಬುದು ಪ್ರತಿಭಟನೆಯ ಪ್ರಮುಖ ಬೇಡಿಕೆಯಾಗಿತ್ತು.

## ಇಲಾಖೆಯ ಅಧಿಕಾರಿಗಳು ಸಮನ್ವಯದಿಂದ ಕೆಲಸ ನಿರ್ವಹಿಸಿ: ಜಿಲ್ಲಾಧಿಕಾರಿ

ಬಂದಿವೆ ಅವುಗಳು ಮರುಕಳಿಸದಂತೆ ಅಧಿಕಾರಿಗಳು ಎಚ್ಚರಿಕೆವಹಿಸುವುದರ ಜೊತೆಗೆ ಸೂಕ್ಷ್ಮ ಮತ್ತು ಅತಿಸೂಕ್ಷ್ಮ ಗ್ರಾಮಗಳೆಂದು ಗುರುತಿಸಿದ ಊರುಗಳಲ್ಲಿ ಸಭೆ ನಡೆಸಿ ವಿವಿಧ ಸಮುದಾಯಗಳು ಸೌಹಾರ್ದತೆಯಿಂದ ಇರುವಂತೆ ಜನರಲ್ಲಿ ಈ ಕುರಿತು ಜಾಗೃತಿ ಮೂಡಿಸುವ ಕೆಲಸ ಅಧಿಕಾರಿಗಳು ಮಾಡಬೇಕು. ಆಯಾ ಗ್ರಾಮಗಳಿಗೆ ಭೇಟಿ ನೀಡಿದಾಗ ಅಲ್ಲಿನ ಅಂಗನವಾಡಿ, ಶೌಚಾಲಯ ಸೇರಿದಂತೆ ಇತರೆ ಯಾವುದೇ ಸಮಸ್ಯೆಗಳಿದ್ದರೆ ನಮ್ಮ ಗಮನಕ್ಕೆ ತರಬೇಕು. ಅಧಿಕಾರಿಗಳು ಹಾಸ್ಟೆಲ್‌ಗಳಿಗೆ ಭೇಟಿ ನೀಡಿ ಮಕ್ಕಳಿಗಾಗಿ ಸರಿಯಾಗಿ ಊಟ ಮತ್ತು ಉಪಹಾರ ನೀಡುತ್ತಿದ್ದಾರೆ ಎನ್ನುವ ಕುರಿತು ತಾವು ಹಾಸ್ಟೆಲಗಳಿಗೆ ಭೇಟಿ ನೀಡುತ್ತಿರುವುದಕ್ಕೆ ಅಭಿನಂದನೆಗಳು. ಅಧಿಕಾರಿಗಳು ಟೀಮ್ ಈ ರೀತಿಯಲ್ಲಿ ಕೆಲಸ ಮಾಡಿದಾಗ ಯಾವುದೇ ಸಮಸ್ಯೆಗಳು ಇರುವುದಿಲ್ಲ ಎಂದು ಹೇಳಿದರು.

ರಾಯಚೂರು ಮಹಾನಗರ ಪಾಲಿಕೆ ಆಯುಕ್ತರಾದ ಜುಬಿನ್ ಮೊಹೊಪಾತ್ರ ಅವರು ಮಾತನಾಡಿ, ಅಧಿಕಾರಿಗಳು ಸಮಯಕ್ಕೆ ಸರಿಯಾಗಿ ಕೆಲಸ ಮಾಡಿಬೇಕು. ಯಾವುದೇ ಸಮಸ್ಯೆಗಳಾದರೆ ಅವುಗಳನ್ನು ನಮ್ಮ ಗಮನಕ್ಕೆ ತಂದು ಅದರ ಪರಿಹಾರಕ್ಕಾಗಿ ಕ್ರಮ ವಹಿಸಬೇಕು. ಜನ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಸಾಮಾಜಿಕ ಅನಿಷ್ಠಾಗಳ ನಿರ್ಮೂಲನೆಗೆ ನಾವೆಲ್ಲರೂ ಕೆಲಸ ಮಾಡಬೇಕಿದೆ ಎಂದು ಹೇಳಿದರು.

ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಜಿ.ಹರೀಶ ಅವರು ಮಾತನಾಡಿ, ಇಡೀ ರಾಜ್ಯದಲ್ಲಿ ರಾಯಚೂರು ಜಿಲ್ಲೆಯಲ್ಲಿ ಹೆಚ್ಚಿನ ಎಸ್.ಸಿ., ಎಸ್ಟಿ ದೌರ್ಜನ್ಯ ಪ್ರಕರಣಗಳ ಕೇಸಗಳು ಪೊಲೀಸ್ ಠಾಣೆಗಳಲ್ಲಿ ದಾಖಲಾಗಿವೆ. ಇವುಗಳು ನಡೆಯದಂತೆ ಮುಂಜಾಗ್ರತೆವಹಿಸಲು ಜಿಲ್ಲೆಯ ಪ್ರತಿ ಪೊಲೀಸ್ ಠಾಣೆಗಳಲ್ಲಿ ಎಸಿ, ಎಸ್ಟಿ ಸಮುದಾಯದ ನಾಯಕರನ್ನು ಕರೆಸಿ ಸಭೆಗಳನ್ನು ಮಾಡಲಾಗುತ್ತಿದೆ. ಅಧಿಕಾರಿಗಳು ವ್ಯಾಟ್ಸಫ್ ಗ್ರುಫ್ ಮಾಡಿ ಎಲ್ಲಿ ಘಟನೆ ನಡೆಯುತ್ತದೆ ಆ ಮಾಹಿತಿ ನಮಗೆ ತಕ್ಷಣ ತಲುಪಿಸಬೇಕು. ಜಿಲ್ಲಾಡಳಿತ ಮತ್ತು ತಾಲ್ಲೂಕು ಆಡಳಿತದ ಸೂಚನೆಗಳನ್ನು ನಮ್ಮ ಪೊಲೀಸ್ ಇಲಾಖೆ ಪಾಲನೆ ಮಾಡುತ್ತದೆ ಎಂದು ಹೇಳಿದರು.

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಕೃಷ್ಣ ಶಾವಂತಗೇರಾ ಅವರು ದೌರ್ಜನ್ಯ ಪ್ರಕರಣಗಳ ತಾಲ್ಲೂಕು ಸಮಿತಿಯ ಕಾರ್ಯ ಚಟುವಟಿಕೆಗಳನ್ನು ಸಭೆಯಲ್ಲಿ ಸವಿವರವಾಗಿ ತಿಳಿಸಿದರು.

ಇದೇ ಸಂದರ್ಭದಲ್ಲಿ ರಾಯಚೂರು ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್, ಲಿಂಗಸುಗೂರು ಸಹಾಯಕ ಆಯುಕ್ತರಾದ ನಾಗೇಂದ್ರ ಬಾಬು ಕುರ್ಮಾ, ಜಿಲ್ಲಾ ಪಂಚಾಯತ್ ಮುಖ್ಯಯೋಜನಾಧಿಕಾರಿ ಟಿ.ರೋಣಿ, ರಾಯಚೂರು ಮಹಾನಗರ ಪಾಲಿಕೆಯ ಕಂದಾಯ ವಿಭಾಗದ ಉಪ ಆಯುಕ್ತರಾದ ಸಂತೋಷಿ ರಾಣಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕಿ ಶರಣಮ್ಮ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಸುನೀತಾ ಸೇರಿದಂತೆ ಜಿಲ್ಲೆಯ ವಿವಿಧ ತಾಲೂಕಿನ ತಹಶೀಲ್ದಾರರು, ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು, ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಸಭೆಯಲ್ಲಿ ಇದ್ದರು.

## ಶಶೀಲ್ ನಮೋಶಿ ಪರ ವಿವಿಧ ಶಿಕ್ಷಣ ಸಂಸ್ಥೆಗಳಲ್ಲಿ ಡಿ.ಎಸ್. ಅರುಣ್, ಶಿವರಾಜ ಪಾಟೀಲ ಮತಯಾಚನೆ

ಎಂದು ಉಲ್ಲೇಖಿಸಿದ ಅವರು, ಪ್ರಸ್ತುತ ಖಾಲಿ ಇರುವ ಶಿಕ್ಷಕರ ಹುದ್ದೆಗಳ ಭರ್ತಿಗೂ ಸರ್ಕಾರ ಆದ್ಯತೆ ನೀಡಬೇಕು ಎಂದು ಹೇಳಿದರು.

ನಗರ ಶಾಸಕ ಡಾ. ಎಸ್. ಶಿವರಾಜ ಪಾಟೀಲ ಮಾತನಾಡಿ, ರಾಜ್ಯದ ಆರ್ಥಿಕ ಪರಿಸ್ಥಿತಿ ಮತ್ತು ಸರ್ಕಾರದ ಆದ್ಯತೆಗಳ ಕುರಿತು ಟೀಕೆ ವ್ಯಕ್ತಪಡಿಸಿದರು. ಶಿಕ್ಷಕರ ನೇಮಕಾತಿ, ವೇತನ, ಆರೋಗ್ಯ ಭದ್ರತೆ ಹಾಗೂ ಸೇವಾ ಸೌಲಭ್ಯಗಳಂತಹ ವಿಷಯಗಳಿಗೆ ಸರ್ಕಾರ ಹೆಚ್ಚಿನ ಗಮನ ನೀಡಬೇಕಾಗಿದೆ ಎಂದು ಹೇಳಿದರು.

ವಿಧಾನ ಪರಿಷತ್‌ನಲ್ಲಿ ಶಿಕ್ಷಣ ಮತ್ತು ಶಿಕ್ಷಕರಿಗೆ ಸಂಬಂಧಿಸಿದ ವಿಷಯಗಳ ಕುರಿತು ಬಲವಾದ ಪ್ರತಿನಿಧಿತ್ವ ಅಗತ್ಯವಿದ್ದು, ಶಿಕ್ಷಕರು ಮತದಾನದ ವೇಳೆ ಎಚ್ಚರಿಕೆಯಿಂದ ತಮ್ಮ ಮತ ಚಲಾಯಿಸಬೇಕು. ಕಳೆದ ಚುನಾವಣೆಯಲ್ಲಿ ಹೆಚ್ಚಿನ ಮತಗಳು ಅಸಿಂಧುವಾಗಿದ್ದ ಹಿನ್ನೆಲೆಯಲ್ಲಿ ಮತದಾನ ವಿಧಾನವನ್ನು ಸರಿಯಾಗಿ ಅನುಸರಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಶಿಕ್ಷಕರು ಕನಿಷ್ಠ ವೇತನ, ಕೌಶಲ್ಯ ತರಬೇತಿ, ಆರೋಗ್ಯ ವಿಮೆ, ಸಾಲ ಸೌಲಭ್ಯ ಸೇರಿದಂತೆ ವಿವಿಧ ಬೇಡಿಕೆಗಳನ್ನು ನಾಯಕರ ಮುಂದಿಟ್ಟರು.

ರೇಸ್ ಚಾಣಕ್ಯ ಶಾಲೆಯ ಅಧ್ಯಕ್ಷೆ ಸಾವಿತ್ರಿ ಪುರುಷೋತ್ತಮ, ವೇದಾಂತ ಕಾಲೇಜಿನ ಅಧ್ಯಕ್ಷ ರಾಕೇಶ್ ರಾಜಲಬಂಡಿ, ರೇಸ್ ಕಾನ್ಸೆಪ್ಟ್ ಶಾಲೆಯ ಸಹ ಕಾರ್ಯದರ್ಶಿ ವಿಜ್ಞಾನ ವೆಂಕಟೇಶ್, ಚಂದ್ರಮೋಹನ್ ರೆಡ್ಡಿ, ಕೊಂಡ ಸರಸ್ವತಮ್ಮ ಹನುಮಂತಯ್ಯ ಶಾಲೆಯ ಕಾರ್ಯದರ್ಶಿ ಕೆ.ವಿ. ಮನೋಹರ, ಉಪಾಧ್ಯಕ್ಷ ಬಿ. ಜಗದೀಶ ಗುಪ್ತಾ ಹಾಗೂ ವಿಜ್ಞಾನ ಶಾಲೆಯ ಅಧ್ಯಕ್ಷ ವಿಜ್ಞಾನ ವೆಂಕಟೇಶ್ ತಮ್ಮ ತಮ್ಮ ಸಂಸ್ಥೆಗಳಲ್ಲಿ ಮತಯಾಚನೆ ಕಾರ್ಯಕ್ರಮ ಆಯೋಜಿಸಿದ್ದರು.

ಕಾರ್ಯಕ್ರಮಗಳಲ್ಲಿ ಬಿಜೆಪಿ ರಾಜ್ಯ ಸದಸ್ಯ ರಾಜಕುಮಾರ, ತ್ರಿವಿಕ್ರಮ ಜೋಶಿ, ಜಿಲ್ಲಾ ಉಪಾಧ್ಯಕ್ಷ ಬಿ. ಗೋವಿಂದ, ಟಿ. ಶ್ರೀನಿವಾಸ ರೆಡ್ಡಿ, ಮಂಡಲ ಅಧ್ಯಕ್ಷ ಊಟ್ಕೂರು ರಾಘವೇಂದ್ರ, ಜೆಡಿಎಸ್ ರಾಜ್ಯ ಪ್ರಧಾನ ಕಾರ್ಯದರ್ಶಿ ಗಾಣಧಾಳ ಲಕ್ಷ್ಮೀಪತಿ, ಬಿಜೆಪಿ ಮುಖಂಡರಾದ ಕಡಗೋಲು ಆಂಜನೇಯ, ಡಾ. ನಾಗರಾಜ ಭಾಲ್ಕಿ, ನರಸಪ್ಪ ಯಕ್ಲಾಸಪೂರು, ಪಲುಗುಲ ನಾಗರಾಜ, ತಾಳಪಲ್ಲಿ ಶ್ರೀನಿವಾಸ, ಕೆ.ಇ. ವೀರ ಪ್ರಕಾಶ ಸೇರಿದಂತೆ ಪಕ್ಷದ ಮುಖಂಡರು ಉಪಸ್ಥಿತರಿದ್ದರು.

## ಎಸ್‌ಐಆರ್ ವಿರುದ್ಧ ಅ.9ರಂದು ರಾಯಚೂರಿನಲ್ಲಿ ಬೃಹತ್ ಹೋರಾಟ

ಮತದಾರರ ಪಟ್ಟಿ ಪರಿಷ್ಕರಣೆ ಸಂಪೂರ್ಣ ಪಾರದರ್ಶಕವಾಗಿರಬೇಕು ಎಂದರು.

ಚುನಾವಣಾ ಆಯೋಗವು ಯಾವುದೇ ರಾಜಕೀಯ ಒತ್ತಡ ಅಥವಾ ಪ್ರಭಾವಕ್ಕೆ ಒಳಗಾಗದೆ ಸ್ವತಂತ್ರವಾಗಿ ಕಾರ್ಯನಿರ್ವಹಿಸಬೇಕು. ಎಸ್‌ಐರ್ಆ ಕುರಿತು ಎದ್ದಿರುವ ಅನುಮಾನಗಳಿಗೆ ಆಯೋಗ ಸ್ಪಷ್ಟ ಉತ್ತರ ನೀಡಬೇಕಾಗಿದೆ. ಈ ಪ್ರಕ್ರಿಯೆಯನ್ನು ರದ್ದುಪಡಿಸುವುದರೊಂದಿಗೆ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರು ಹುದ್ದೆ ತೊರೆಯಬೇಕು ಎಂದು ಅವರು ಒತ್ತಾಯಿಸಿದರು.

ಕೆ.ಜಿ. ವೀರೇಶ್ ಮಾತನಾಡಿ, ಎಸ್‌ಐಆರ್‌ನಿಂದ ದಲಿತರು, ಅಲ್ಪಸಂಖ್ಯಾತರು, ಕೂಲಿ ಕಾರ್ಮಿಕರು ಸೇರಿದಂತೆ ದುರ್ಬಲ ಮತ್ತು ಶ್ರಮಿಕ ವರ್ಗದ ಅರ್ಹ ಮತದಾರರು ಪಟ್ಟಿಯಿಂದ ಹೊರಗುಳಿಯುವ ಆತಂಕವಿದೆ ಎಂದು ಆರೋಪಿಸಿದರು. ಯಾವುದೇ ಸಮುದಾಯದ ಮತದಾನದ ಹಕ್ಕಿಗೆ ಧಕ್ಕೆಯಾಗುವುದನ್ನು ಒಪ್ಪಿಕೊಳ್ಳುವುದಿಲ್ಲ. ಅರ್ಹರೆಲ್ಲರ ಹೆಸರನ್ನು ಉಳಿಸಿಕೊಂಡು ಪಾರದರ್ಶಕವಾಗಿ ಪರಿಷ್ಕರಣೆ ನಡೆಸಬೇಕು. ಇಲ್ಲದಿದ್ದರೆ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ಎಚ್ಚರಿಸಿದರು.

ಅ.9ರ ಪ್ರತಿಭಟನೆಯಲ್ಲಿ ಇಂಡಿಯಾ ಮೈತ್ರಿಕೂಟದ ವಿವಿಧ ಪಕ್ಷಗಳು, ಸಂಘಟನೆಗಳ ಪದಾಧಿಕಾರಿಗಳು ಹಾಗೂ ಪ್ರಜಾಪ್ರಭುತ್ವ ಪರ ಹೋರಾಟಗಾರರು ಭಾಗವಹಿಸಲಿದ್ದಾರೆ. ನೇತಾಜಿ ನಗರದಿಂದ ಅಂಬೇಡ್ಕರ್ ವೃತ್ತದವರೆಗೆ ನಡೆಯುವ ಮೆರವಣಿಗೆಗೆ ಸಾರ್ವಜನಿಕರೂ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವಂತೆ ಮುಖಂಡರು ಕೋರಿದರು.

ಸುದ್ದಿಗೋಷ್ಠಿಯಲ್ಲಿ ಮೊಹಮ್ಮದ್ ಶಾಲಂ, ನರಸಿಂಹಲು ಮಾಡಗಿರಿ, ಅಸಿಮುದ್ದಿನ್, ಜಯಣ್ಣ, ಜಯಂತರಾವ್ ಪತಂಗೆ, ಖಾಜಾ ಅಸ್ಲಾಂ, ಜಾನ್ ವೆಸ್ಲಿ, ಆಂಜಿನೇಯ್ಯ ಕುರುಬದೊಡ್ಡಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಸಿಲಿಂಡರ್ ಸ್ಫೋಟದಲ್ಲಿ ಆರು ಮಂದಿ ಗಂಭೀರ: ಉತ್ತಮ ಚಿಕಿತ್ಸೆಗೆ ಜನಪ್ರತಿನಿಧಿಗಳ ನೆರವು ಕೋರಿ ಕುಟುಂಬ ಮನವಿ






ರಾಯಚೂರು, ಅ.6: ಉದ್ಯೋಗಕ್ಕಾಗಿ ಹುಟ್ಟೂರು ತೊರೆದು ಬೆಂಗಳೂರಿನಲ್ಲಿ ನೆಲೆಸಿದ್ದ ರಾಯಚೂರು ಜಿಲ್ಲೆಯ ಸಿರವಾರ ತಾಲೂಕಿನ ಹೊಕ್ರಾಣಿ ಗ್ರಾಮದ ಕುಟುಂಬವೊಂದು ಸಿಲಿಂಡರ್ ಸ್ಫೋಟದಿಂದ ಭೀಕರ ದುರಂತಕ್ಕೊಳಗಾಗಿದ್ದು, ಪತಿ-ಪತ್ನಿ ಹಾಗೂ ನಾಲ್ವರು ಮಕ್ಕಳು ಗಂಭೀರವಾಗಿ ಗಾಯಗೊಂಡಿದ್ದಾರೆ. ಗಾಯಾಳುಗಳಿಗೆ ಉತ್ತಮ ಚಿಕಿತ್ಸೆ ದೊರಕಿಸಲು ಜಿಲ್ಲೆಯ ಜನಪ್ರತಿನಿಧಿಗಳು ನೆರವಿಗೆ ಧಾವಿಸಬೇಕು ಎಂದು ಕುಟುಂಬದ ಸಂಬಂಧಿಕರು ಮನವಿ ಮಾಡಿದ್ದಾರೆ.

ಬೆಂಗಳೂರು ನಗರದ ನಾಯಂಡಹಳ್ಳಿ ಸಮೀಪದ ವಿನಾಯಕ ಲೇಔಟ್‌ನಲ್ಲಿ ಅಕ್ಟೋಬರ್ 3ರಂದು ಈ ಘಟನೆ ಸಂಭವಿಸಿದೆ. ಅಡುಗೆ ಅನಿಲ ಸಿಲಿಂಡರ್ ಸ್ಫೋಟಗೊಂಡ ಪರಿಣಾಮ ಹೊಕ್ರಾಣಿ ಗ್ರಾಮದ ಕರಿಲಿಂಗಪ್ಪ (40), ಅವರ ಪತ್ನಿ ಲಕ್ಷ್ಮಮ್ಮ ಹಾಗೂ ಮಕ್ಕಳಾದ ಚೈತ್ರ, ಬಸವನಗೌಡ, ಗೀತಾ ಮತ್ತು ಗಿರಿಜಾ ಗಂಭೀರವಾಗಿ ಗಾಯಗೊಂಡಿದ್ದಾರೆ.

ಘಟನೆಯ ಬಳಿಕ ಗಾಯಾಳುಗಳನ್ನು ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಗೆ ದಾಖಲಿಸಲಾಗಿದ್ದು, ತುರ್ತು ಚಿಕಿತ್ಸಾ ವಿಭಾಗದಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಗಾಯಾಳುಗಳ ಪೈಕಿ ಲಕ್ಷ್ಮಮ್ಮ ಹಾಗೂ ಒಂದು ಮಗುವಿನ ಸ್ಥಿತಿ ಗಂಭೀರವಾಗಿದೆ ಎಂದು ಕುಟುಂಬದವರು ತಿಳಿಸಿದ್ದಾರೆ.

ಉದ್ಯೋಗ ಅರಸಿ ಬೆಂಗಳೂರಿಗೆ ತೆರಳಿದ್ದ ಕರಿಲಿಂಗಪ್ಪ, ಭಾರತೀಯ ಕ್ರೀಡಾ ಪ್ರಾಧಿಕಾರ (ಎಸ್ಎಐ)ದಲ್ಲಿ ದಿನಗೂಲಿ ಆಧಾರದಲ್ಲಿ ಗಾರ್ಡನಿಂಗ್ ಕೆಲಸ ಮಾಡುತ್ತಿದ್ದರು. ಪತ್ನಿ ಹಾಗೂ ನಾಲ್ವರು ಮಕ್ಕಳೊಂದಿಗೆ ನಾಯಂಡಹಳ್ಳಿಯ ವಿನಾಯಕ ಲೇಔಟ್‌ನ ಬಾಡಿಗೆ ಮನೆಯಲ್ಲಿ ವಾಸಿಸುತ್ತಿದ್ದರು. ಮನೆಯಲ್ಲಿದ್ದ ಅಡುಗೆ ಸಿಲಿಂಡರ್ ಸ್ಫೋಟಗೊಂಡು ಇಡೀ ಕುಟುಂಬವೇ ಗಾಯಗೊಂಡಿದೆ.

ಕಳೆದ ಕೆಲವು ದಿನಗಳಿಂದ ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಮುಂದುವರಿದಿದ್ದರೂ, ಇನ್ನಷ್ಟು ಉತ್ತಮ ಮತ್ತು ವಿಶೇಷ ವೈದ್ಯಕೀಯ ಚಿಕಿತ್ಸೆ ಅಗತ್ಯವಿದೆ ಎಂದು ಕುಟುಂಬದ ಸಂಬಂಧಿಕರು ಹೇಳಿದ್ದಾರೆ. ಕುಟುಂಬದ ಆರ್ಥಿಕ ಪರಿಸ್ಥಿತಿಯೂ ದುರ್ಬಲವಾಗಿರುವುದರಿಂದ ಮುಂದಿನ ಚಿಕಿತ್ಸಾ ವೆಚ್ಚ ಭರಿಸುವುದು ಕಷ್ಟವಾಗುತ್ತಿದೆ ಎಂದು ಅಳಲು ತೋಡಿಕೊಂಡಿದ್ದಾರೆ.

ಜಿಲ್ಲಾ ಉಸ್ತುವಾರಿ ಸಚಿವರು, ಸಂಬಂಧಪಟ್ಟ ಕ್ಷೇತ್ರದ ಶಾಸಕರು, ಲೋಕಸಭಾ ಸದಸ್ಯರು ಹಾಗೂ ಜಿಲ್ಲೆಯ ಇತರ ಜನಪ್ರತಿನಿಧಿಗಳು ಗಾಯಾಳುಗಳ ಚಿಕಿತ್ಸೆಗೆ ಅಗತ್ಯ ನೆರವು ಒದಗಿಸಬೇಕು. ವೈದ್ಯಕೀಯ ವ್ಯವಸ್ಥೆಯೊಂದಿಗೆ ಸಮನ್ವಯ ಸಾಧಿಸಿ ಗುಣಮಟ್ಟದ ಚಿಕಿತ್ಸೆ ದೊರಕುವಂತೆ ಕ್ರಮ ಕೈಗೊಳ್ಳಬೇಕು ಎಂದು ಸಂಬಂಧಿಕರು ಮನವಿ ಮಾಡಿದ್ದಾರೆ.

ಸಮಾಜ ಸೇವಕರು ಹಾಗೂ ದಾನಿಗಳೂ ಸಂಕಷ್ಟದಲ್ಲಿರುವ ಕುಟುಂಬದ ನೆರವಿಗೆ ಮುಂದಾಗಬೇಕು. ಒಂದೇ ಕುಟುಂಬದ ಆರು ಮಂದಿ ಗಾಯಗೊಂಡಿರುವ ಈ ದುರ್ಘಟನೆಯಿಂದ ಕುಟುಂಬದ ಬಂಧುಗಳು ಆತಂಕದಲ್ಲಿದ್ದು, ಗಾಯಾಳುಗಳು ಶೀಘ್ರ ಚೇತರಿಸಿಕೊಳ್ಳಲು ಅಗತ್ಯ ಸಹಾಯ ದೊರೆಯಲಿ ಎಂಬ ನಿರೀಕ್ಷೆಯಲ್ಲಿ ಕಾಯುತ್ತಿದ್ದಾರೆ.

# ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ ಅವರಿಂದ ರಾಯಚೂರು ಜಿಲ್ಲಾ ಪ್ರವಾಸ

ರಾಯಚೂರು ಅ. 06 (ಕರ್ನಾಟಕ ವಾರ್ತೆ): ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ ಅವರು ಅಕ್ಟೋಬರ್ 8ರಂದು ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ.

ಅಕ್ಟೋಬರ್ 8ರ ಬೆಳಿಗ್ಗೆ 8.30ಕ್ಕೆ ಹೊಸಪೇಟೆಯನ್ನು ರಸ್ತೆ ಮಾರ್ಗವಾಗಿ ನಿರ್ಗಮಿಸಿ, ಅಂದು ಬೆಳಿಗ್ಗೆ 9ಕ್ಕೆ ಕೊಪ್ಪಳ ಮತ್ತು ರಾಯಚೂರು ಜಿಲ್ಲೆಯ ಬರ ಪೀಡಿತ ತಾಲ್ಲೂಕುಗಳ ಬರ ಪೀಡಿತ ಪ್ರದೇಶಗಳ ಸ್ಥಳ ಪರಿಶೀಲನೆ ಮಾಡಿ, ಸಂಜೆ 04ಕ್ಕೆ ಕೊಪ್ಪಳ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಬರ ಪರಿಸ್ಥಿತಿ ಕುರಿತು ಅಧಿಕಾರಿಗಳೊಂದಿಗೆ ಸಭೆ ನಡೆಸಲಿದ್ದಾರೆ.

ನಂತರ ಸಂಜೆ 6ಕ್ಕೆ ಕೊಪ್ಪಳದಿಂದ ರಸ್ತೆ ಮಾರ್ಗವಾಗಿ ಹುಬ್ಬಳಿ ವಿಮಾನ ನಿಲ್ದಾಣಕ್ಕೆ ತೆರಳಿ, ರಾತ್ರಿ 8.25ರ ವಿಮಾನದ ಮೂಲಕ ಬೆಂಗಳೂರಿಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಉಪ ಮುಖ್ಯಮಂತ್ರಿಗಳ ಆಪ್ತ ಕಾರ್ಯದರ್ಶಿಗಳಾದ ಡಾ.ಚನ್ನಬಸಪ್ಪ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅ. 08 ರಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೇರ ಸಂದರ್ಶನ

ರಾಯಚೂರು ಅ. 06 (ಕರ್ನಾಟಕ ವಾರ್ತೆ): ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಅಕ್ಟೋಬರ್ 08 ರಂದು ಬೆಳಿಗ್ಗೆ 10 ಗಂಟೆಯಿದ ಮಧ್ಯಾಹ್ನ 1 ಗಂಟೆವರೆಗೆ ನೇರ ಸಂದರ್ಶನ ಆಯೋಜಿಸಲಾಗಿದ್ದು, ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗುವಂತೆ ಕೋರಲಾಗಿದೆ.

ನೇರ ಸಂದರ್ಶನದಲ್ಲಿ ಎರಡು ಖಾಸಗಿ ಕಂಪನಿಗಳು ಭಾಗವಹಿಸಿ ತಮ್ಮಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇರವಾಗಿ ಭರ್ತಿ ಮಾಡಿಕೊಳ್ಳಲಿದ್ದಾರೆ.

ಅರ್ಹತೆಗಳು: ಎಲ್ಲಾ ಪದವೀಧರರು ಆಸಕ್ತ 18 ರಿಂದ 26 ವರ್ಷಗಳ ವರೆಗಿನ ಅಭ್ಯರ್ಥಿಗಳು ಈ ಮೇಳದಲ್ಲಿ ಭಾಗವಹಿಸಬಹುದಾಗಿದೆ.

ವಿದ್ಯಾರ್ಹತೆಯ ಅಂಕಪಟ್ಟಿಗಳ ಜೆರಾಕ್ಸ್ ಪ್ರತಿಗಳು ಮತ್ತು ತಮ್ಮ ಬಯೋಡೆಟಾ, ಆಧಾರ್ ಕಾರ್ಡ್ ಪ್ರತಿ, ಭಾವಚಿತ್ರಗನ್ನು ಸಲ್ಲಿಸಬೇಕು. ನೇರ ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ಶುಲ್ಕವಿರುವುದಿಲ್ಲ, ಬದಲಾಗಿ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬಹುದು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಬಾಲಾಜಿ ಕಾಂಪ್ಲೆಕ್ಸ್, ನೆಲ ಮಹಡಿ, ಗೂಡ್ ಶೆಡ್ ರಸ್ತೆ, ಸ್ಟೇಷನ್ ಏರಿಯಾ, ರಾಯಚೂರು ಹಾಗೂ ದೂರವಾಣಿ ಸಂಖ್ಯೆ 08532-231684, 9008211750, 8197930236, ಗೆ ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ನವೀನ ಕುಮಾರ್ ಸಂಗೇಪಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಂಗನವಾಡಿ ನೌಕರರ ಬೇಡಿಕೆ ಈಡೇರಿಕೆಗೆ ಡಿ.1ರಿಂದ ದೆಹಲಿಯಲ್ಲಿ ಪ್ರತಿಭಟನೆ: ಶಾಂತ ಘಂಟಿ



ರಾಯಚೂರು, ಅ.6: ಅಂಗನವಾಡಿ ನೌಕರರ ದೀರ್ಘಕಾಲದ ಬೇಡಿಕೆಗಳಿಗೆ ಸರ್ಕಾರಗಳು ಸಮರ್ಪಕವಾಗಿ ಸ್ಪಂದಿಸುತ್ತಿಲ್ಲ. ಐಸಿಡಿಎಸ್ ಯೋಜನೆಗೆ ಮೀಸಲಿಡುವ ಅನುದಾನವನ್ನು ಕಡಿತಗೊಳಿಸುವ ಮೂಲಕ ಯೋಜನೆಯ ಸ್ವರೂಪವನ್ನೇ ದುರ್ಬಲಗೊಳಿಸಲಾಗುತ್ತಿದೆ ಎಂದು ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘದ ರಾಜ್ಯ ಕಾರ್ಯಾಧ್ಯಕ್ಷೆ ಕಾಂ. ಶಾಂತ ಘಂಟಿ ಆರೋಪಿಸಿದರು.

ನಗರದ ಕನ್ನಡ ಭವನದಲ್ಲಿ ಮಂಗಳವಾರ ನಡೆದ ಅಂಗನವಾಡಿ ನೌಕರರ ಸಂಘ ಸಿಐಟಿಯು ರಾಯಚೂರು ತಾಲೂಕು ಘಟಕದ 8ನೇ ಸಮ್ಮೇಳನವನ್ನು ಸಸಿಗೆ ನೀರೆರೆಯುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರಿಗೆ ಅವರ ಮೂಲ ಕರ್ತವ್ಯಗಳ ಜೊತೆಗೆ ಇತರ ಇಲಾಖೆಗಳ ಹೆಚ್ಚುವರಿ ಕೆಲಸಗಳನ್ನು ವಹಿಸಲಾಗುತ್ತಿದೆ. ಆದರೆ ಅವರಿಗೆ ನೀಡಲಾಗುತ್ತಿರುವ ಗೌರವಧನವನ್ನು ಜೀವನ ನಿರ್ವಹಣೆಗೆ ತಕ್ಕಂತೆ ಹೆಚ್ಚಿಸುವಲ್ಲಿ ಸರ್ಕಾರಗಳು ಆಸಕ್ತಿ ತೋರುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಅಂಗನವಾಡಿ ಕೇಂದ್ರಗಳಲ್ಲಿ ಪೂರ್ವ ಪ್ರಾಥಮಿಕ ಶಿಕ್ಷಣವನ್ನು ಬಲಪಡಿಸುವುದಾಗಿ ಸರ್ಕಾರ ಹೇಳುತ್ತಿದ್ದು, ಮತ್ತೊಂದೆಡೆ ಸರ್ಕಾರಿ ಶಾಲೆಗಳಲ್ಲಿಯೂ ಪೂರ್ವ ಪ್ರಾಥಮಿಕ ತರಗತಿಗಳನ್ನು ಆರಂಭಿಸಲಾಗುತ್ತಿದೆ. ಇದರಿಂದ ಮುಂದಿನ ದಿನಗಳಲ್ಲಿ ಅಂಗನವಾಡಿ ಕೇಂದ್ರಗಳ ಅಸ್ತಿತ್ವ ಮತ್ತು ಕಾರ್ಯವ್ಯಾಪ್ತಿಯ ಮೇಲೆಯೇ ಪರಿಣಾಮ ಬೀರುವ ಆತಂಕವಿದೆ ಎಂದು ಹೇಳಿದರು.

ನೌಕರರಿಗೆ ಕನಿಷ್ಠ ವೇತನ, ಸಾಮಾಜಿಕ ಭದ್ರತೆ ಹಾಗೂ ಉದ್ಯೋಗದ ರಕ್ಷಣೆಯನ್ನು ಖಚಿತಪಡಿಸಬೇಕು ಎಂಬ ಬೇಡಿಕೆ ಮುಂದಿಟ್ಟುಕೊಂಡು ಕೇಂದ್ರ ಸರ್ಕಾರದ ವಿರುದ್ಧ ಡಿ.1ರಿಂದ 3ರವರೆಗೆ ದೆಹಲಿಯಲ್ಲಿ ಸಂಸತ್ ಮುತ್ತಿಗೆ ಹೋರಾಟ ನಡೆಸಲು ನಿರ್ಧರಿಸಲಾಗಿದೆ. ರಾಯಚೂರು ತಾಲೂಕಿನ ಅಂಗನವಾಡಿ ನೌಕರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಹೋರಾಟಕ್ಕೆ ಬಲ ತುಂಬಬೇಕು ಎಂದು ಕರೆ ನೀಡಿದರು.

ಮುಂಬರುವ ಫೆಬ್ರವರಿಯಲ್ಲಿ ಮಂಡನೆಯಾಗಲಿರುವ ಕೇಂದ್ರ ಬಜೆಟ್‌ನಲ್ಲಿ ಅಂಗನವಾಡಿ ನೌಕರರ ಗೌರವಧನ ಮತ್ತು ವೇತನ ಹೆಚ್ಚಳಕ್ಕೆ ಕ್ರಮ ಕೈಗೊಳ್ಳದಿದ್ದರೆ, ಬಜೆಟ್ ಮಂಡನೆಯ ಮರುದಿನದಿಂದಲೇ ಸಂಸದರು ಹಾಗೂ ಶಾಸಕರ ಮನೆಗಳ ಮುಂದೆ ಅನಿರ್ದಿಷ್ಟಾವಧಿ ಪ್ರತಿಭಟನೆ ನಡೆಸುವ ಕುರಿತು ಸಂಘಟನೆ ತೀರ್ಮಾನಿಸಿದೆ ಎಂದು ತಿಳಿಸಿದರು.

ಐಸಿಡಿಎಸ್ ಯೋಜನೆಯ ಉಳಿವು, ಅಂಗನವಾಡಿ ನೌಕರರ ಉದ್ಯೋಗ ಭದ್ರತೆ ಮತ್ತು ನ್ಯಾಯಯುತ ವೇತನಕ್ಕಾಗಿ ಸಂಘಟಿತ ಹೋರಾಟ ಅನಿವಾರ್ಯವಾಗಿದೆ. ಪ್ರತಿಯೊಬ್ಬ ನೌಕರರೂ ತಮ್ಮ ಹಕ್ಕುಗಳಿಗಾಗಿ ನಡೆಯುವ ಹೋರಾಟದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಶಾಂತ ಘಂಟಿ ಮನವಿ ಮಾಡಿದರು.

ಸಮ್ಮೇಳನದ ಅಧ್ಯಕ್ಷತೆಯನ್ನು ಎಚ್. ಪದ್ಮಾ ವಹಿಸಿದ್ದರು. ಸಿಐಟಿಯು ಜಿಲ್ಲಾ ಕಾರ್ಯದರ್ಶಿ ಡಿ.ಎಸ್. ಶರಣಬಸವ, ಕರ್ನಾಟಕ ಪ್ರಾಂತ ರೈತ ಸಂಘದ ಕೆ.ಜಿ. ವೀರೇಶ, ಅಂಗನವಾಡಿ ನೌಕರರ ಸಂಘದ ಜಿಲ್ಲಾ ಖಜಾಂಚಿ ವರಲಕ್ಷ್ಮೀ ಹಾಗೂ ಎಸ್. ಗಂಗಮ್ಮ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು. ಕಾರ್ಯಕ್ರಮದ ಆರಂಭದಲ್ಲಿ ಎಚ್. ಪದ್ಮಾ ಸಂಘಟನೆಯ ಧ್ವಜಾರೋಹಣ ನೆರವೇರಿಸಿದರು.

# ಸಂತೆ ಬಜಾರ್ ಮಹಿಳಾ ಶೌಚಾಲಯಕ್ಕೆ ಮೂಲಸೌಕರ್ಯ ಕಲ್ಪಿಸಿ: ಜನಪರ ಸಮಿತಿ ಒತ್ತಾಯ



ಲಿಂಗಸುಗೂರು: ಪಟ್ಟಣದ 5ನೇ ವಾರ್ಡ್‌ನ ಸಂತೆ ಬಜಾರ್ ಪ್ರದೇಶದಲ್ಲಿರುವ ಮಹಿಳಾ ಶೌಚಾಲಯದ ಸುತ್ತಮುತ್ತ ಸ್ವಚ್ಛತಾ ಕಾರ್ಯ ಆರಂಭಿಸಿರುವುದು ಸ್ವಾಗತಾರ್ಹವಾಗಿದ್ದರೂ, ಶೌಚಾಲಯವನ್ನು ಮಹಿಳೆಯರು ಮುಕ್ತವಾಗಿ ಬಳಸಲು ಅಗತ್ಯವಾದ ಮೂಲಸೌಕರ್ಯಗಳನ್ನು ತಕ್ಷಣ ಕಲ್ಪಿಸಬೇಕು ಎಂದು ಕರ್ನಾಟಕ ಜನಪರ ಹೋರಾಟ ಲಿಂಗಸುಗೂರು ಸಮಿತಿ ಒತ್ತಾಯಿಸಿದೆ.

ಸಂತೆ ಬಜಾರ್‌ನಲ್ಲಿ ಮಹಿಳೆಯರಿಗಾಗಿ ಸೂಕ್ತ ಶೌಚಾಲಯ ವ್ಯವಸ್ಥೆ ಕಲ್ಪಿಸಬೇಕು ಎಂದು ಸಾರ್ವಜನಿಕರು ಹಾಗೂ ಮಹಿಳೆಯರು ಕಳೆದ ಸುಮಾರು 20 ವರ್ಷಗಳಿಂದ ಹಲವು ಬಾರಿ ಹೋರಾಟ ನಡೆಸಿ, ಪುರಸಭೆ ಅಧಿಕಾರಿಗಳಿಗೆ ಮನವಿ ಸಲ್ಲಿಸುತ್ತಾ ಬಂದಿದ್ದರೂ ಸಮರ್ಪಕ ಕ್ರಮ ಕೈಗೊಳ್ಳಲಾಗಿರಲಿಲ್ಲ ಎಂದು ಸಮಿತಿ ಸದಸ್ಯರು ತಿಳಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಕರ್ನಾಟಕ ಜನಪರ ಹೋರಾಟ ಲಿಂಗಸುಗೂರು ಸಮಿತಿ ವತಿಯಿಂದ ಒಂದು ವಾರದ ಹಿಂದೆ ಪುರಸಭೆಗೆ ಮನವಿ ಸಲ್ಲಿಸಿ ಸಮಸ್ಯೆಯ ಕುರಿತು ಅಧಿಕಾರಿಗಳ ಗಮನ ಸೆಳೆಯಲಾಗಿತ್ತು. ಅದರ ಪರಿಣಾಮವಾಗಿ ಪುರಸಭೆ ಸಿಬ್ಬಂದಿ ಜೆಸಿಬಿ ಯಂತ್ರದ ಸಹಾಯದಿಂದ ಮಹಿಳಾ ಶೌಚಾಲಯದ ಸುತ್ತಮುತ್ತಲಿನ ಪ್ರದೇಶವನ್ನು ಸ್ವಚ್ಛಗೊಳಿಸುವ ಕಾರ್ಯ ಆರಂಭಿಸಿದ್ದಾರೆ.

ಸ್ವಚ್ಛತಾ ಕಾರ್ಯಕ್ಕೆ ಚಾಲನೆ ದೊರೆತಿರುವುದು ಸಮಿತಿಯ ನಿರಂತರ ಒತ್ತಾಯಕ್ಕೆ ಸಿಕ್ಕ ಪ್ರಾಥಮಿಕ ಸ್ಪಂದನೆಯಾಗಿದೆ. ಆದರೆ ಸಮಸ್ಯೆ ಕೇವಲ ಸ್ವಚ್ಛತೆಯಲ್ಲೇ ಸೀಮಿತವಾಗಿಲ್ಲ. ನೀರು, ಬೆಳಕು, ಬಾಗಿಲು, ಸುರಕ್ಷತೆ ಹಾಗೂ ನಿಯಮಿತ ನಿರ್ವಹಣೆ ಸೇರಿದಂತೆ ಅಗತ್ಯ ಮೂಲಸೌಕರ್ಯಗಳನ್ನು ಒದಗಿಸಿ ಶೌಚಾಲಯವನ್ನು ಸಂಪೂರ್ಣವಾಗಿ ಸಾರ್ವಜನಿಕ ಬಳಕೆಗೆ ಮುಕ್ತಗೊಳಿಸಬೇಕು ಎಂದು ಸಮಿತಿ ಆಗ್ರಹಿಸಿದೆ.

ಸಂತೆ ಬಜಾರ್‌ಗೆ ಪ್ರತಿದಿನ ವ್ಯಾಪಾರಕ್ಕಾಗಿ ಆಗಮಿಸುವ ಮಹಿಳೆಯರು ಮತ್ತು ಸಾರ್ವಜನಿಕರಿಗೆ ಅನುಕೂಲವಾಗುವಂತೆ ಪುರಸಭೆ ತುರ್ತಾಗಿ ಕ್ರಮ ಕೈಗೊಳ್ಳಬೇಕು ಎಂದು ಮುಖಂಡರು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಸಂಘಟನೆಯ ಗೌರವಾಧ್ಯಕ್ಷ ಮೈಬೂಬ್ ಪಾಷಾ ಮನಿಯಾರ್, ಕಾರ್ಯಾಧ್ಯಕ್ಷ ಬಾಬಾಜಾನಿ, ವಿಶ್ವ ನಾಯ್ಡು, ರವಿಕುಮಾರ್, ವಿಜಯಕುಮಾರ್ ಮೇಟಿ, ಮೌನೇಶ್ ಬುಳ್ಳಾಪುರ, ಖಾದರ್ ಭಾಷಾ ಸೇರಿದಂತೆ ಇತರರು ಉಪಸ್ಥಿತರಿದ್ದರು.

# CHOಗಳ ಹೇಳಿಕೆ ವಿರುದ್ಧ ಆರೋಗ್ಯ ನಿರೀಕ್ಷಣಾಧಿಕಾರಿಗಳ ಸಂಘ ಆಕ್ಷೇಪ



ರಾಯಚೂರು, ಅ.6: ವೈದ್ಯಕೀಯ ಮೇಲ್ವಿಚಾರಣಾಧಿಕಾರಿಗಳು (HIO) ಹಾಗೂ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳ (PHCO) ಹುದ್ದೆಗಳನ್ನು ರದ್ದುಪಡಿಸಬೇಕು ಹಾಗೂ ಖಾಯಂ ನೌಕರರು ಕೆಲಸ ಮಾಡುತ್ತಿಲ್ಲ ಎಂಬ ರೀತಿಯಲ್ಲಿ ಸಮುದಾಯ ಆರೋಗ್ಯ ಅಧಿಕಾರಿಗಳು (CHO) ಸಾಮಾಜಿಕ ಜಾಲತಾಣಗಳಲ್ಲಿ ಹೇಳಿಕೆ ನೀಡಿರುವುದಕ್ಕೆ ಕರ್ನಾಟಕ ರಾಜ್ಯ ಆರೋಗ್ಯ ನಿರೀಕ್ಷಣಾಧಿಕಾರಿಗಳ ಸಂಘದ ರಾಯಚೂರು ಜಿಲ್ಲಾ ಶಾಖೆ ಆಕ್ಷೇಪ ವ್ಯಕ್ತಪಡಿಸಿದೆ. ಈ ಕುರಿತು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗೆ ಮನವಿ ಸಲ್ಲಿಸಲಾಗಿದೆ.

HIO ಮತ್ತು PHCO ಅಧಿಕಾರಿಗಳು ಸಾರ್ವಜನಿಕ ಆರೋಗ್ಯ ಕಾರ್ಯಕ್ರಮಗಳು, ಸಾಂಕ್ರಾಮಿಕ ರೋಗಗಳ ನಿಯಂತ್ರಣ ಹಾಗೂ ಗ್ರಾಮೀಣ ಆರೋಗ್ಯ ಸೇವೆಗಳಲ್ಲಿ ಹಲವು ಜವಾಬ್ದಾರಿಗಳನ್ನು ನಿರ್ವಹಿಸುತ್ತಿದ್ದು, ಅವರ ಸೇವೆಯನ್ನು ಅವಹೇಳನ ಮಾಡುವ ಹೇಳಿಕೆಗಳು ಸರಿಯಲ್ಲ ಎಂದು ಸಂಘ ತಿಳಿಸಿದೆ.

ಸಂಬಂಧಪಟ್ಟವರ ವಿರುದ್ಧ 15 ದಿನಗಳೊಳಗೆ ಕ್ರಮ ಕೈಗೊಳ್ಳದಿದ್ದರೆ ಭಾರತೀಯ ನ್ಯಾಯ ಸಂಹಿತೆಯ ಸಂಬಂಧಿತ ಸೆಕ್ಷನ್‌ಗಳು ಹಾಗೂ ಕರ್ನಾಟಕ ನಾಗರಿಕ ಸೇವಾ (ನಡತೆ) ನಿಯಮಗಳು-1966ರಡಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗೆ ದೂರು ಸಲ್ಲಿಸಲಾಗುವುದು ಎಂದು ಸಂಘ ಎಚ್ಚರಿಸಿದೆ.

# ಕರ್ನಾಟಕ ಧಮ್ಮ ಜನಜಾಗೃತಿ ಯಾತ್ರೆ2026ಕ್ಕೆ ಚಾಲನೆ



ದೇವದುರ್ಗ, ಅ.6: ಧಮ್ಮ, ಸಮಾನತೆ ಹಾಗೂ ಸಾಮಾಜಿಕ ಜಾಗೃತಿಯ ಸಂದೇಶವನ್ನು ಜನರಿಗೆ ತಲುಪಿಸುವ ಉದ್ದೇಶದಿಂದ ಹಮ್ಮಿಕೊಂಡಿರುವ ಕರ್ನಾಟಕ ಧಮ್ಮ ಜನಜಾಗೃತಿ ಯಾತ್ರೆ2026ಕ್ಕೆ ದೇವದುರ್ಗದಲ್ಲಿ ಚಾಲನೆ ನೀಡಲಾಯಿತು.

ಅಂತರರಾಷ್ಟ್ರೀಯ ಬೌದ್ಧ ಯುವ ಸಂಘಟನೆ ಹಾಗೂ ವಿವಿಧ ಸಂಘ-ಸಂಸ್ಥೆಗಳ ಸಹಯೋಗದಲ್ಲಿ ನಡೆಯುತ್ತಿರುವ ಯಾತ್ರೆಯ ಮೂಲಕ ಸಂವಿಧಾನದ ಆಶಯಗಳು, ಬುದ್ಧರ ಧಮ್ಮ ಸಂದೇಶ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಅವರ ವಿಚಾರಧಾರೆಗಳನ್ನು ಜನರಿಗೆ ಪರಿಚಯಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ದೇವದುರ್ಗದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ನಡೆದ ಕಾರ್ಯಕ್ರಮದಲ್ಲಿ ಧಮ್ಮ ಅನುಯಾಯಿಗಳು ಹಾಗೂ ವಿವಿಧ ಸಂಘಟನೆಗಳ ಮುಖಂಡರು ಭಾಗವಹಿಸಿ ಯಾತ್ರೆಗೆ ಶುಭಕೋರಿದರು. ಅಹಿಂಸೆ, ಸಮಾನತೆ, ಸಹೋದರತ್ವ ಮತ್ತು ಸಂವಿಧಾನ ಮೌಲ್ಯಗಳ ಕುರಿತು ಜನರಲ್ಲಿ ಹೆಚ್ಚಿನ ಅರಿವು ಮೂಡಬೇಕು ಎಂದು ಕರೆ ನೀಡಲಾಯಿತು.

ಧಮ್ಮದ ಬೆಳಕು ಮನೆಮನೆಗೂಸಂವಿಧಾನದ ಮೌಲ್ಯ ಜನಮನಕ್ಕೂ ಎಂಬ ಆಶಯದೊಂದಿಗೆ ಯಾತ್ರೆ ಮುಂದುವರಿಯಲಿದೆ ಎಂದು ಸಂಘಟಕರು ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ವಿಶ್ವನಾಥ್ ಬಲ್ಲಿದವ್, ಮೋಹನ್ ಬಲ್ಲಿದವ್, ಮಹಾಂತೇಶ್ ಭವಾನಿ, ರಂಗನಾಥ್ ಕೊಂಬಿನ್, ಗುಂಡಪ್ಪ ನಾಯಕ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ವಕೀಲರು ತಮ್ಮ ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ವಹಿಸಬಾರದು: ಬಿ.ಬಿ. ಜಕಾತಿ



ರಾಯಚೂರು, ಅ.6: ನ್ಯಾಯಾಲಯದ ಕಲಾಪಗಳು ಹಾಗೂ ಕಕ್ಷಿದಾರರ ಪ್ರಕರಣಗಳಲ್ಲಿ ನಿರಂತರವಾಗಿ ತೊಡಗಿಸಿಕೊಂಡಿರುವ ವಕೀಲರು ತಮ್ಮ ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ವಹಿಸಬಾರದು. ವೈಯಕ್ತಿಕ ಹಾಗೂ ಕುಟುಂಬದ ಹಿತದೃಷ್ಟಿಯಿಂದ ನಿಯಮಿತ ಆರೋಗ್ಯ ತಪಾಸಣೆಗೆ ಆದ್ಯತೆ ನೀಡಬೇಕು ಎಂದು ಜಿಲ್ಲಾ ಸತ್ರ ನ್ಯಾಯಾಧೀಶ ಬಿ.ಬಿ. ಜಕಾತಿ ಹೇಳಿದರು.

ರಾಯಚೂರು ನ್ಯಾಯವಾದಿಗಳ ಸಂಘ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಂಯುಕ್ತಾಶ್ರಯದಲ್ಲಿ ನ್ಯಾಯವಾದಿಗಳ ಸಂಘದ ಆವರಣದಲ್ಲಿ ಆಯೋಜಿಸಿದ್ದ ವಕೀಲರ ಆರೋಗ್ಯ ತಪಾಸಣಾ ಶಿಬಿರವನ್ನು ಸ್ವತಃ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ವಕೀಲರ ವೃತ್ತಿಜೀವನ ಅತ್ಯಂತ ಒತ್ತಡದಿಂದ ಕೂಡಿದ್ದು, ದಿನನಿತ್ಯ ನ್ಯಾಯಾಲಯದ ಕಲಾಪ, ಪ್ರಕರಣಗಳ ಅಧ್ಯಯನ ಹಾಗೂ ಕಕ್ಷಿದಾರರ ಸಮಸ್ಯೆಗಳಿಗೆ ಹೆಚ್ಚಿನ ಸಮಯ ಮೀಸಲಿಡಬೇಕಾಗುತ್ತದೆ. ಈ ಕಾರಣದಿಂದ ತಮ್ಮ ಆರೋಗ್ಯದ ಕಡೆ ಗಮನ ಹರಿಸಲು ಸಾಧ್ಯವಾಗದ ಸಂದರ್ಭಗಳು ಹೆಚ್ಚಾಗುತ್ತವೆ. ಆರೋಗ್ಯ ಸಮಸ್ಯೆಗಳನ್ನು ಆರಂಭಿಕ ಹಂತದಲ್ಲೇ ಗುರುತಿಸಲು ನಿಯಮಿತ ತಪಾಸಣೆ ಸಹಕಾರಿಯಾಗುತ್ತದೆ ಎಂದರು.

ನ್ಯಾಯವಾದಿಗಳ ಸಂಘವು ವಕೀಲರ ಆರೋಗ್ಯದ ಬಗ್ಗೆ ಕಾಳಜಿ ವಹಿಸಿ ಇಂತಹ ಶಿಬಿರ ಆಯೋಜಿಸಿರುವುದು ಶ್ಲಾಘನೀಯ ಕಾರ್ಯವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ನ್ಯಾಯವಾದಿಗಳ ಸಂಘದ ಅಧ್ಯಕ್ಷ ಎನ್. ಶಿವಶಂಕರ್ ಮಾತನಾಡಿ, ವಕೀಲರು ನ್ಯಾಯಾಲಯ ಹಾಗೂ ಕಚೇರಿ ಕೆಲಸಗಳಲ್ಲಿ ಸದಾ ಕಾರ್ಯನಿರತರಾಗಿರುವುದರಿಂದ ತಮ್ಮ ಆರೋಗ್ಯ ತಪಾಸಣೆಯನ್ನು ಮುಂದೂಡುವ ಪ್ರವೃತ್ತಿ ಕಂಡುಬರುತ್ತದೆ. ಆರೋಗ್ಯದ ಕುರಿತು ಜಾಗೃತಿ ಮೂಡಿಸಿ, ಅಗತ್ಯ ವೈದ್ಯಕೀಯ ಪರೀಕ್ಷೆಗಳನ್ನು ಒಂದೇ ಸ್ಥಳದಲ್ಲಿ ಒದಗಿಸುವ ಉದ್ದೇಶದಿಂದ ಶಿಬಿರ ಆಯೋಜಿಸಲಾಗಿದೆ ಎಂದು ತಿಳಿಸಿದರು.

ಮುಂದಿನ ದಿನಗಳಲ್ಲಿ ಜಿಲ್ಲೆಯ ವಕೀಲರಿಗೆ ಅನುಕೂಲವಾಗುವಂತೆ ಜಿಲ್ಲಾ ಮಟ್ಟದಲ್ಲಿ ಬೃಹತ್ ಆರೋಗ್ಯ ತಪಾಸಣಾ ಶಿಬಿರ ಆಯೋಜಿಸುವ ಉದ್ದೇಶವಿದೆ ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ನ್ಯಾಯಾಧೀಶ ಸಿದ್ದರಾಮಪ್ಪ ಕಲ್ಯಾಣರ್, ಹಿರಿಯ ವಕೀಲರಾದ ಇಧುದರ್ ಪಾಟೀಲ್, ಪರಶುರಾಮ ಮಾಡಗಿರಿ, ನ್ಯಾಯವಾದಿಗಳ ಸಂಘದ ಕಾರ್ಯದರ್ಶಿ ಹನುಮಂತರೆಡ್ಡಿ, ಉಪಾಧ್ಯಕ್ಷ ಗೌಸ್ ಪಾಶ, ಸಹ ಕಾರ್ಯದರ್ಶಿ ಮರಿಯಪ್ಪ, ಖಜಾಂಚಿ ರೇಣುಕಾ, ವಕೀಲರಾದ ಎಚ್. ಹನುಮಂತಪ್ಪ, ವಿರೂಪಾಕ್ಷಿಗೌಡ, ಆಂಜನೇಯ, ಶಿವಕುಮಾರ್ ನಾಯಕ, ಶಿವಕುಮಾರ್ ಮಾಗಳಮನಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಶಿಬಿರದಲ್ಲಿ ನೂರಾರು ವಕೀಲರು ಭಾಗವಹಿಸಿ ಆರೋಗ್ಯ ತಪಾಸಣೆ ಮಾಡಿಸಿಕೊಂಡರು.

# ವಿವಿಧತೆಯಲ್ಲಿ ಏಕತೆ ದೇಶದ ವೈಶಿಷ್ಟ್ಯ: ಡಾ. ಜೆ.ಎಲ್. ಈರಣ್ಣ



ಮಾನ್ವಿ: ದೇಶದ ವೈವಿಧ್ಯತೆಯನ್ನು ಗೌರವಿಸುವುದರೊಂದಿಗೆ ಏಕತೆ ಮತ್ತು ಸೌಹಾರ್ದದ ಮೌಲ್ಯಗಳನ್ನು ಯುವಜನರಲ್ಲಿ ಬೆಳೆಸುವುದು ಇಂದಿನ ಅಗತ್ಯವಾಗಿದೆ ಎಂದು ಬಾಷುಮಿಯಾ ಸಾಹುಕಾರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಡಾ. ಜೆ.ಎಲ್. ಈರಣ್ಣ ಹೇಳಿದರು.

ಪಟ್ಟಣದ ಬಾಷುಮಿಯಾ ಸಾಹುಕಾರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಬೆಂಗಳೂರಿನ ಸಂತಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರದ ವತಿಯಿಂದ ಮಂಗಳವಾರ ಆಯೋಜಿಸಿದ್ದ ಜಿಲ್ಲಾ ಮಟ್ಟದ ಅಂತರ್ ಕಾಲೇಜು ಸಂಸ್ಕೃತಿ ಪುನಶ್ಚೇತನ ಶಿಬಿರದ ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡಿದರು.

ವಿದ್ಯಾರ್ಥಿಗಳಲ್ಲಿ ಪರಸ್ಪರ ಪ್ರೀತಿ, ಸಹಬಾಳ್ವೆ ಹಾಗೂ ಮಾನವೀಯ ಮೌಲ್ಯಗಳನ್ನು ಬೆಳೆಸಬೇಕಾಗಿದೆ. ದ್ವೇಷ ಮತ್ತು ಭೇದಭಾವದಿಂದ ದೂರವಿದ್ದು ಸಮಾಜದಲ್ಲಿ ಸೌಹಾರ್ದದ ವಾತಾವರಣ ನಿರ್ಮಿಸುವಲ್ಲಿ ಯುವಜನರ ಪಾತ್ರ ಮಹತ್ವದ್ದಾಗಿದೆ. ಕನಕದಾಸರು ಹಾಗೂ ತತ್ವಪದಕಾರರ ಸಾಹಿತ್ಯ ಮತ್ತು ವಿಚಾರಧಾರೆಗಳನ್ನು ವಿದ್ಯಾರ್ಥಿಗಳಿಗೆ ಪರಿಚಯಿಸುವ ಇಂತಹ ಕಾರ್ಯಕ್ರಮಗಳು ಅರ್ಥಪೂರ್ಣವಾಗಿವೆ ಎಂದರು.

ಸಂತಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರದ ಸಂಶೋಧನಾ ಸಹಾಯಕ ಮಂಜುನಾಥ ಕಾರ್ಯಕ್ರಮ ಉದ್ಘಾಟಿಸಿದರು. ಜಿಲ್ಲಾ ಮಟ್ಟದ ಅಂತರ್ ಕಾಲೇಜು ಸಂಸ್ಕೃತಿ ಪುನಶ್ಚೇತನ ಶಿಬಿರದ ಜಿಲ್ಲಾ ಸಂಚಾಲಕಿ ರೇಣುಕಾ ಕೊಡಗುಂಟಿ ಪ್ರಾಸ್ತಾವಿಕವಾಗಿ ಮಾತನಾಡಿ ಶಿಬಿರದ ಉದ್ದೇಶ ಮತ್ತು ಚಟುವಟಿಕೆಗಳ ಕುರಿತು ವಿವರಿಸಿದರು.

ಶಿಬಿರದಲ್ಲಿ ಜಿಲ್ಲೆಯ ವಿವಿಧ ಕಾಲೇಜುಗಳಿಂದ 135 ವಿದ್ಯಾರ್ಥಿಗಳು ಭಾಗವಹಿಸಿದ್ದರು. ಇವರಲ್ಲಿ 75 ವಿದ್ಯಾರ್ಥಿಗಳು ಸಂತಕವಿ ಕನಕದಾಸ ಮತ್ತು ತತ್ವಪದಕಾರರಿಗೆ ಸಂಬಂಧಿಸಿದ ಪ್ರಬಂಧ, ವೈಚಾರಿಕ ಭಾಷಣ ಹಾಗೂ ಓದು ವ್ಯಾಖ್ಯಾನ ಸ್ಪರ್ಧೆಗಳಲ್ಲಿ ಪಾಲ್ಗೊಂಡರು.

ಪ್ರಬಂಧ ಸ್ಪರ್ಧೆಯಲ್ಲಿ 15 ವಿದ್ಯಾರ್ಥಿಗಳು, ವೈಚಾರಿಕ ಭಾಷಣ ಸ್ಪರ್ಧೆಯಲ್ಲಿ 14 ಹಾಗೂ ಓದು ವ್ಯಾಖ್ಯಾನ ಸ್ಪರ್ಧೆಯಲ್ಲಿ 9 ವಿದ್ಯಾರ್ಥಿಗಳು ಬಹುಮಾನ ಪಡೆದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಕಂಪ್ಯೂಟರ್ ವಿಜ್ಞಾನ ವಿಭಾಗದ ಮುಖ್ಯಸ್ಥ ಡಾ. ಸೈಯದ್ ಮಿನಾಜುಲ್ ಹಸನ್, ಆಂತರಿಕ ಗುಣಮಟ್ಟ ಭರವಸೆ ಕೋಶದ ಸಂಚಾಲಕ ಶಶಿಧರ, ಶಿಬಿರದ ಸಹ ಸಂಚಾಲಕರಾದ ಡಾ. ಸೈಯದ್ ಮುಜೀಬ್ ಅಹ್ಮದ್, ಡಾ. ಬಸವರಾಜ ಸುಂಕೇಶ್ವರ ಹಾಗೂ ಬಸವರಾಜ ಭೋಗಾವತಿ ಉಪಸ್ಥಿತರಿದ್ದರು.

ಉಪನ್ಯಾಸಕರಾದ ಡಾ. ಹುಲಿಯಪ್ಪ ಧುಮತಿ ಮತ್ತು ವೀರೇಶ ಸಾಸಲಮರಿ ಕಾರ್ಯಕ್ರಮ ನಿರೂಪಿಸಿದರು. ಮೇರಿ ಗ್ರೇಸಿ ಸ್ವಾಗತಿಸಿದರು. ಡಿ. ಮಂಜುನಾಥ ವಂದಿಸಿದರು.

# ಅ.11ರಿಂದ ಕರೇಗುಡ್ಡ ಶ್ರೀ ಮಹಾಂತೇಶ್ವರ ಮಠದಲ್ಲಿ ಶ್ರೀದೇವಿ ಪುರಾಣ



ಮಾನ್ವಿ: ತಾಲೂಕಿನ ಕರೇಗುಡ್ಡ ಗ್ರಾಮದ ಶ್ರೀ ಮಹಾಂತೇಶ್ವರ ಮಠದಲ್ಲಿ ದಸರಾ ಮಹೋತ್ಸವದ ಅಂಗವಾಗಿ ಅ.11ರಿಂದ ಶ್ರೀದೇವಿ ಪುರಾಣ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಶ್ರೀಮಠದ ಶ್ರೀ ಮಹಾಂತಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು ತಿಳಿಸಿದ್ದಾರೆ.

ಅ.11ರಂದು ಬೆಳಿಗ್ಗೆ 9ಕ್ಕೆ ಶ್ರೀ ಮಹಾಂತಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು ಷಟಸ್ಥಲ ಧ್ವಜಾರೋಹಣ ನೆರವೇರಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಿದ್ದಾರೆ. ಅ.11ರಿಂದ 23ರವರೆಗೆ ಪ್ರತಿದಿನ ಸಂಜೆ 7.30ರಿಂದ ರಾತ್ರಿ 9.30ರವರೆಗೆ ನಂದವಾಡಿಗಿಯ ಮಹಾಂತೇಶ ಶಾಸ್ತ್ರಿಗಳು ಸರಗಣಚಾರಿ ಅವರಿಂದ ಶ್ರೀದೇವಿ ಪುರಾಣ ಪ್ರವಚನ ನಡೆಯಲಿದೆ.

ಅ.14ರಂದು ಶ್ರೀಮಠದ ಲಿಂ. ಮಹಾಂತಪ್ಪ ತಾತನವರ ಪುಣ್ಯಾರಾಧನೆ ನಡೆಯಲಿದೆ. ಅ.23ರಂದು ಶ್ರೀದೇವಿ ಪುರಾಣದ ಸಮಾರೋಪದ ಅಂಗವಾಗಿ ಮಹಾಮಂಗಳ ಕಾರ್ಯಕ್ರಮ ಹಾಗೂ ಸಂಜೆ 5ಕ್ಕೆ ಶ್ರೀಮಠದ ಆವರಣದಲ್ಲಿ ಸುಮಂಗಲಿಯರಿಂದ ಶ್ರೀದೇವಿಯ ಮಹಾರಥೋತ್ಸವ ಜರುಗಲಿದೆ.

ನ.27ರಂದು ಸಂಜೆ 5ಕ್ಕೆ ಲಿಂ. ಶ್ರೀ ಮಹಾಂತಲಿಂಗ ಶಿವಾಚಾರ್ಯ ಮಹಾಸ್ವಾಮಿಗಳ ರಥೋತ್ಸವ ನಡೆಯಲಿದ್ದು, ಒಳಬಳ್ಳಾರಿ ಸುವರ್ಣಗಿರಿ ಮಠದ ಡಾ. ಸಿದ್ದಲಿಂಗ ಮಹಾಸ್ವಾಮಿಗಳು, ಕೊಟ್ಟೂರು ಸಂಸ್ಥಾನ ಮಠದ ಜಗದ್ಗುರು ಶ್ರೀ ಕೊಟ್ಟೂರು ಬಸವಲಿಂಗ ಮಹಾಸ್ವಾಮಿಗಳು, ಶ್ರೀ ಮಹಾಂತಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು ಹಾಗೂ ಶ್ರೀ ಬೂದಿಬಸವ ಶಿವಾಚಾರ್ಯ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ರಾಜ್ಯದ ಸಚಿವರು, ಜನಪ್ರತಿನಿಧಿಗಳು, ಗಣ್ಯರು ಹಾಗೂ ಸುತ್ತಮುತ್ತಲಿನ ಗ್ರಾಮಗಳ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲಿದ್ದಾರೆ ಎಂದು ಶ್ರೀಮಠದ ಪ್ರಕಟಣೆ ತಿಳಿಸಿದೆ.

# ಪಿಂಜಾರ್ ನದಾಫ್ ಸಮುದಾಯಕ್ಕೆ ಪ್ರತ್ಯೇಕ ಅಭಿವೃದ್ಧಿ ನಿಗಮ ಸ್ಥಾಪಿಸಲು ಆಗ್ರಹ



ರಾಯಚೂರು: ಸಾಮಾಜಿಕ, ಶೈಕ್ಷಣಿಕ, ಆರ್ಥಿಕ, ಔದ್ಯೋಗಿಕ ಹಾಗೂ ರಾಜಕೀಯವಾಗಿ ಹಿಂದುಳಿದಿರುವ ಪಿಂಜಾ-ರ್ನದಾಫ್ ಸಮುದಾಯದ ಸಮಗ್ರ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರ ಕೂಡಲೇ ಪ್ರತ್ಯೇಕ ಅಭಿವೃದ್ಧಿ ನಿಗಮ ಸ್ಥಾಪಿಸಬೇಕು ಎಂದು ಅಖಿಲ ಕರ್ನಾಟಕ ಪಿಂಜಾರ್ ನದಾಫ್ ಮನ್ಸೂರಿ ಹಕ್ಕುಗಳ ಸಂಘದ ರಾಜ್ಯಾಧ್ಯಕ್ಷ ಇಮ್ರಾನ್ ಬಡೇಸಾಬ್ ಒತ್ತಾಯಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯಾದ್ಯಂತ ಸುಮಾರು 35ರಿಂದ 40 ಲಕ್ಷ ಜನಸಂಖ್ಯೆ ಹೊಂದಿರುವ ಪಿಂಜಾ-ರ್ನದಾಫ್ ಸಮುದಾಯವು ಹಲವು ದಶಕಗಳಿಂದ ಸಾಮಾಜಿಕ ಹಾಗೂ ಆರ್ಥಿಕ ಸಂಕಷ್ಟಗಳನ್ನು ಎದುರಿಸುತ್ತಿದೆ. ಸಮುದಾಯದ ಬಹುತೇಕ ಕುಟುಂಬಗಳು ಶಿಕ್ಷಣ, ಉದ್ಯೋಗ ಮತ್ತು ರಾಜಕೀಯ ಪ್ರಾತಿನಿಧ್ಯದಲ್ಲಿಯೂ ಹಿಂದುಳಿದಿವೆ ಎಂದು ಹೇಳಿದರು.

ಪಿಂಜಾ-ರ್ನದಾಫ್ ಸಮುದಾಯದವರು ಸಾಂಪ್ರದಾಯಿಕವಾಗಿಹತ್ತಿಹಾಗೂಅರಳೆಯಿಂದ ಗಾದಿ, ದಿಂಬು, ಜಮಖಾನ, ಗುಡಾರ ಮತ್ತು ಹಗ್ಗ ತಯಾರಿಸುವ ವೃತ್ತಿಯನ್ನು ಅವಲಂಬಿಸಿದ್ದರು. ಹಳ್ಳಿಯಿಂದ ಹಳ್ಳಿಗೆ ತೆರಳಿ ಗಾದಿ-ದಿಂಬು ತಯಾರಿಸುತ್ತಿದ್ದ ಕಾರಣ ಅಲೆಮಾರಿ ಸ್ವರೂಪದ ವೃತ್ತಿ ಸಮುದಾಯವಾಗಿಯೂ ಗುರುತಿಸಿಕೊಂಡಿದ್ದರು. ಆದರೆ ಆಧುನಿಕ ಬೆಡ್ ಹಾಗೂ ಇತರ ಉತ್ಪನ್ನಗಳ ಬಳಕೆ ಹೆಚ್ಚಾದಂತೆ ಸಾಂಪ್ರದಾಯಿಕ ವೃತ್ತಿ ಕ್ಷೀಣಿಸಿದ್ದು, ಅನೇಕ ಕುಟುಂಬಗಳು ಜೀವನೋಪಾಯದ ಸಂಕಷ್ಟಕ್ಕೆ ಸಿಲುಕಿವೆ ಎಂದು ವಿವರಿಸಿದರು.

1994ರಲ್ಲಿ ಸಮುದಾಯವನ್ನು ಹಿಂದುಳಿದ ವರ್ಗಗಳ ಪ್ರವರ್ಗ-1ಕ್ಕೆ ಸೇರಿಸಲಾಗಿದೆ. ಆದರೆ ಸರ್ಕಾರದ ವಿವಿಧ ಯೋಜನೆಗಳ ಸೌಲಭ್ಯ ಪಡೆಯುವ ಸಂದರ್ಭದಲ್ಲಿ ಇಲಾಖೆಗಳ ನಡುವೆ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ತೆರಳಿದರೆ ಕೆಎಂಡಿಸಿಯಲ್ಲಿ ಸೌಲಭ್ಯ ಪಡೆಯುವಂತೆ ಹೇಳಲಾಗುತ್ತದೆ. ಕೆಎಂಡಿಸಿಯನ್ನು ಸಂಪರ್ಕಿಸಿದರೆ ಪ್ರವರ್ಗ-1ಕ್ಕೆ ಸೇರಿದ ಕಾರಣ ಹಿಂದುಳಿದ ವರ್ಗಗಳ ಇಲಾಖೆಯನ್ನು ಸಂಪರ್ಕಿಸುವಂತೆ ತಿಳಿಸಲಾಗುತ್ತಿದೆ. ಇದರಿಂದ ಅರ್ಹ ಫಲಾನುಭವಿಗಳಿಗೆ ಸೌಲಭ್ಯಗಳು ಸಮರ್ಪಕವಾಗಿ ತಲುಪುತ್ತಿಲ್ಲ ಎಂದು ಆರೋಪಿಸಿದರು.

ಸಮುದಾಯಕ್ಕೆ ರಾಜಕೀಯ ಪ್ರಾತಿನಿಧ್ಯ ಹಾಗೂ ಪ್ರಬಲ ನಾಯಕತ್ವದ ಕೊರತೆಯಿರುವ ಕಾರಣ ವಿವಿಧ ಸರ್ಕಾರಗಳು ತಮ್ಮ ಬೇಡಿಕೆಗಳಿಗೆ ನಿರೀಕ್ಷಿತ ಮಟ್ಟದಲ್ಲಿ ಸ್ಪಂದಿಸಿಲ್ಲ. ಸುಮಾರು 30 ವರ್ಷಗಳಿಂದ ಪ್ರತ್ಯೇಕ ಅಭಿವೃದ್ಧಿ ನಿಗಮ ಸ್ಥಾಪಿಸಬೇಕೆಂದು ಹೋರಾಟ ನಡೆಸಲಾಗುತ್ತಿದೆ ಎಂದರು.

ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಅಂದಿನ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಪಿಂಜಾ-ರ್ನದಾಫ್ ಸೇರಿದಂತೆ ಇತರ 13 ಜಾತಿಗಳನ್ನು ಒಳಗೊಂಡ ಅಭಿವೃದ್ಧಿ ನಿಗಮವನ್ನು 2023ರ ಮಾರ್ಚ್ 24ರಂದು ಘೋಷಿಸಿದ್ದರು. ಇತ್ತೀಚಿನ ಚಳಿಗಾಲದ ಅಧಿವೇಶನದಲ್ಲಿಯೂ ಅಥಣಿ ಶಾಸಕ ಲಕ್ಷ್ಮಣ ಸವದಿ ಅವರು ಪಿಂಜಾ-ರ್ನದಾಫ್ ಸಮುದಾಯಕ್ಕೆ ಪ್ರತ್ಯೇಕ ಅಭಿವೃದ್ಧಿ ಮಂಡಳಿ ಸ್ಥಾಪಿಸುವಂತೆ ಧ್ವನಿ ಎತ್ತಿದ್ದಾರೆ ಎಂದು ತಿಳಿಸಿದರು.

ಪ್ರಸ್ತುತ ಸರ್ಕಾರದ ಗಮನಕ್ಕೂ ಸಮುದಾಯದ ಬೇಡಿಕೆಯನ್ನು ತರಲಾಗಿದೆ. ರಾಯಚೂರು ಜಿಲ್ಲೆಯ ಶಾಸಕರು ಹಾಗೂ ಸಚಿವರ ಮೂಲಕ ಮುಖ್ಯಮಂತ್ರಿಗಳ ಬಳಿಗೆ ನಿಯೋಗ ಕರೆದೊಯ್ಯುವಂತೆ ಮನವಿ ಮಾಡಿದ್ದರೂ ನಿರೀಕ್ಷಿತ ಸ್ಪಂದನೆ ದೊರೆತಿಲ್ಲ. ಶಾಸಕಿ ಜಿ. ಕರೆಮ್ಮ ನಾಯಕ ಅವರು ಮಾತ್ರ ಮನವಿಗೆ ಸ್ಪಂದಿಸಿ ಬೆಂಬಲ ನೀಡಿದ್ದಾರೆ ಎಂದು ಹೇಳಿದರು.

ಸಮುದಾಯದ ಸಮಸ್ಯೆಗಳು ಮತ್ತು ಸಾಮಾಜಿಕ-ಆರ್ಥಿಕ ಸ್ಥಿತಿಗತಿ ಕುರಿತು ಕುಲಶಾಸ್ತ್ರೀಯ ಅಧ್ಯಯನ ನಡೆಸಲು ಹಿಂದುಳಿದ ವರ್ಗಗಳ ಅಭಿವೃದ್ಧಿ ಇಲಾಖೆಯ ಡಿ. ದೇವರಾಜ ಅರಸು ಸಂಶೋಧನಾ ಸಂಸ್ಥೆಯಿಂದ ₹45 ಲಕ್ಷ ಅನುದಾನ ಬಿಡುಗಡೆ ಮಾಡಲಾಗಿತ್ತು. 23 ಸದಸ್ಯರ ತಂಡವು ರಾಜ್ಯದ 25 ಜಿಲ್ಲೆಗಳಲ್ಲಿ ಅಧ್ಯಯನ ನಡೆಸಿ, 2026ರ ಫೆ.20ರಂದು ಸರ್ಕಾರಕ್ಕೆ ವರದಿ ಸಲ್ಲಿಸಿದೆ ಎಂದು ತಿಳಿಸಿದರು.

ಈ ಅಧ್ಯಯನ ವರದಿಯನ್ನು ಆಧಾರವಾಗಿಟ್ಟುಕೊಂಡು ಪಿಂಜಾ-ರ್ನದಾಫ್ ಸಮುದಾಯದ ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕ ಅಭಿವೃದ್ಧಿಗೆ ಪ್ರತ್ಯೇಕ ಅಭಿವೃದ್ಧಿ ನಿಗಮವನ್ನು ಸರ್ಕಾರ ಕೂಡಲೇ ಸ್ಥಾಪಿಸಬೇಕು. ಸಮುದಾಯದ ದೀರ್ಘಕಾಲದ ಬೇಡಿಕೆಗೆ ಮುಖ್ಯಮಂತ್ರಿ ಸ್ಪಂದಿಸಬೇಕು ಎಂದು ಇಮ್ರಾನ್ ಬಡೇಸಾಬ್ ಒತ್ತಾಯಿಸಿದರು.

ಮುಂದಿನ ದಿನಗಳಲ್ಲಿ ಸಮುದಾಯದ ನ್ಯಾಯಸಮ್ಮತ ಬೇಡಿಕೆಗಳಿಗೆ ಸ್ಪಂದಿಸಿ ಬೆಂಬಲ ನೀಡುವ ರಾಜಕೀಯ ಪಕ್ಷ ಹಾಗೂ ಅಭ್ಯರ್ಥಿಗಳಿಗೆ ಸಮುದಾಯ ಬೆಂಬಲ ನೀಡಲಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಖಾಸಿಂಬೀ, ಅಲ್ಲಾವುದ್ದೀನ್, ಶಾಲಾಮ್, ಜಾವೀದ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಮುಖ್ಯ ಚುನಾವಣಾ ಆಯುಕ್ತರ ವಜಾಗೆ ಆಗ್ರಹಿಸಿ ಸೋಲಿಡಾರಿಟಿ ಯೂತ್ ಮೂವ್ಮೆಂಟ್ ಮನವಿ




ಮಾನ್ವಿ: ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್ಐಆರ್) ಪ್ರಕ್ರಿಯೆ ಕುರಿತು ಉಂಟಾಗಿರುವ ಗಂಭೀರ ಅನುಮಾನಗಳು ಮತ್ತು ಆಕ್ಷೇಪಗಳ ಹಿನ್ನೆಲೆಯಲ್ಲಿ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರನ್ನು ಹುದ್ದೆಯಿಂದ ವಜಾಗೊಳಿಸಬೇಕು ಎಂದು ಸೋಲಿಡಾರಿಟಿ ಯೂತ್ ಮೂವ್ಮೆಂಟ್ ಆಗ್ರಹಿಸಿದೆ. ಜ್ಞಾನೇಶ್ ಕುಮಾರ್ ಪ್ರಸ್ತುತ ಭಾರತದ ಮುಖ್ಯ ಚುನಾವಣಾ ಆಯುಕ್ತರಾಗಿದ್ದಾರೆ.

ಪಟ್ಟಣದ ತಹಶೀಲ್ದಾರ್ ಕಚೇರಿಯಲ್ಲಿ ಸೋಲಿಡಾರಿಟಿ ಯೂತ್ ಮೂವ್ಮೆಂಟ್ ಪದಾಧಿಕಾರಿಗಳು ರಾಷ್ಟ್ರಪತಿಗಳಿಗೆ ಸಲ್ಲಿಸುವ ಮನವಿಯನ್ನು ಗ್ರೇಡ್ ತಹಶೀಲ್ದಾರ್ ಅಬ್ದುಲ್ ವಾಹಿದ್ ಅವರಿಗೆ ನೀಡಿದರು.

ಈ ವೇಳೆ ಸಂಘಟನೆಯ ತಾಲೂಕು ಅಧ್ಯಕ್ಷ ನಾಸಿರ್ ಅಲಿ ಮಾತನಾಡಿ, ಭಾರತದ ಸಂವಿಧಾನ ಅರ್ಹ ನಾಗರಿಕರಿಗೆ ಮತದಾನದ ಹಕ್ಕು ನೀಡಿದ್ದು, ಮುಕ್ತ, ನ್ಯಾಯಸಮ್ಮತ ಮತ್ತು ಪಾರದರ್ಶಕ ಚುನಾವಣೆಗಳು ಪ್ರಜಾಪ್ರಭುತ್ವದ ಮೂಲಾಧಾರವಾಗಿವೆ. ಆದ್ದರಿಂದ ಮತದಾರರ ಪಟ್ಟಿಯ ತಯಾರಿ, ತಿದ್ದುಪಡಿ, ಸೇರ್ಪಡೆ ಹಾಗೂ ಹೆಸರು ತೆಗೆದುಹಾಕುವ ಪ್ರಕ್ರಿಯೆಗಳು ಕಾನೂನುಬದ್ಧ ಮತ್ತು ಪರಿಶೀಲಿಸಬಹುದಾದ ರೀತಿಯಲ್ಲಿ ನಡೆಯಬೇಕು ಎಂದು ಹೇಳಿದರು.

ಎಸ್ಐಆರ್ ಪ್ರಕ್ರಿಯೆಯಲ್ಲಿ ದೊಡ್ಡ ಸಂಖ್ಯೆಯ ಮತದಾರರನ್ನು ವಿವಿಧ ವರ್ಗಗಳಲ್ಲಿ ಗುರುತಿಸಲಾಗಿದ್ದು, ಲಕ್ಷಾಂತರ ಮತದಾರರಿಗೆ ನೋಟಿಸ್ ನೀಡಲಾಗಿದೆ ಎಂದು ಅವರು ಆರೋಪಿಸಿದರು. ಈ ಪ್ರಕ್ರಿಯೆಯಿಂದ ಅರ್ಹ ಮತದಾರರು ಮತದಾರರ ಪಟ್ಟಿಯಿಂದ ಹೊರಗುಳಿಯುವ ಆತಂಕ ಉಂಟಾಗಿದೆ ಎಂದು ಹೇಳಿದರು.

ಕೆಲವು ಕ್ಷೇತ್ರಗಳಲ್ಲಿ ಮತದಾರರ ಹೆಸರನ್ನು ತೆಗೆದುಹಾಕಲು ನಮೂನೆ-7 ದುರುಪಯೋಗವಾಗುತ್ತಿದೆ ಎಂಬ ಆರೋಪಗಳ ಕುರಿತು ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಎಸ್ಐಆರ್ ಪ್ರಕ್ರಿಯೆಯನ್ನು ರದ್ದುಪಡಿಸಬೇಕು, ಈ ಪ್ರಕ್ರಿಯೆಯಲ್ಲಿ ಹೆಸರು ಕೈಬಿಟ್ಟಿರುವ ಅರ್ಹ ಮತದಾರರ ಹೆಸರುಗಳನ್ನು ಮರು ಸೇರ್ಪಡೆಗೊಳಿಸಬೇಕು ಹಾಗೂ ಮತದಾರರಿಗೆ ಪರಿಣಾಮಕಾರಿ ಮೇಲ್ಮನವಿ ಮತ್ತು ಮರುಪರಿಶೀಲನಾ ವ್ಯವಸ್ಥೆ ಒದಗಿಸಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

ಇದಲ್ಲದೆ, ನಮೂನೆ-6ರಲ್ಲಿ ಮಾಡಲಾಗಿದೆ ಎನ್ನಲಾಗುತ್ತಿರುವ ಬದಲಾವಣೆಗಳ ಕಾನೂನುಬದ್ಧತೆ ಹಾಗೂ ಅವುಗಳನ್ನು ಜಾರಿಗೆ ತಂದ ವಿಧಾನವನ್ನು ಪರಿಶೀಲಿಸಬೇಕು ಎಂದು ಸಂಘಟನೆ ಒತ್ತಾಯಿಸಿದೆ.

ಚುನಾವಣಾ ಆಯೋಗದ ಕಾರ್ಯವೈಖರಿ ಕುರಿತು ಉದ್ಭವಿಸಿರುವ ಪ್ರಶ್ನೆಗಳಿಗೆ ಸಮರ್ಪಕ ಉತ್ತರ ದೊರೆಯಬೇಕು. ಈ ಹಿನ್ನೆಲೆಯಲ್ಲಿ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರನ್ನು ಹುದ್ದೆಯಿಂದ ವಜಾಗೊಳಿಸಬೇಕು ಎಂದು ನಾಸಿರ್ ಅಲಿ ಆಗ್ರಹಿಸಿದರು.

ಈ ಸಂದರ್ಭದಲ್ಲಿ ತಾಲೂಕು ಉಪಾಧ್ಯಕ್ಷ ಇಮ್ರಾನ್ ಖಾನ್, ಶೈಖ್ ಬಾಬಾ ಹುಸೇನ್, ಮುಹಮ್ಮದ್ ಹಾರೂನ್, ಅಬ್ದುಲ್ ಹಸೀಬ್, ಇರ್ಷಾದ್ ಖಾನ್, ಜಬ್ಬಾರ್, ಶೇಖ್ ಆಸಿಫ್, ಲಾಲಾ ಮಿಯಾ, ಹುಸೇನ್ ಸಾಬ್, ಸಮೀರ್ ಪಾಶಾ, ಶೇಖ್ ಮಹೆಬೂಬ್, ಎಂ. ಮಹಬೂಬ್, ದಸ್ತಗೀರ್ ಸಾಬ್, ಹನೀಫ್, ಎಂ.ಡಿ. ಆಫೀಸ್, ಮಹಮ್ಮದ್ ಅಲಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# 12 ಮಾರಕ ರೋಗಗಳ ತಡೆಗೆ ಮಕ್ಕಳಿಗೆ ವಯಸ್ಸಿಗೆ ತಕ್ಕ ಲಸಿಕೆ ಕಡ್ಡಾಯ: ಡಾ. ಗುಂಡಮ್ಮ




ರಾಯಚೂರು: ಬಾಲ್ಯದಲ್ಲಿ ಕಾಣಿಸಿಕೊಳ್ಳುವ 12 ಮಾರಕ ರೋಗಗಳಿಂದ ಮಕ್ಕಳನ್ನು ರಕ್ಷಿಸಲು ಹುಟ್ಟಿನಿಂದ ಒಂದು ವರ್ಷದೊಳಗೆ ವಯಸ್ಸಿಗೆ ಅನುಗುಣವಾಗಿ ಎಲ್ಲ ಲಸಿಕೆಗಳನ್ನು ತಪ್ಪದೆ ಹಾಕಿಸಬೇಕು ಎಂದು ಸಿಯಾತಲಾಬ್ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಗುಂಡಮ್ಮ ಪಾಲಕರಿಗೆ ಮನವಿ ಮಾಡಿದರು.

ಸಾರ್ವತ್ರಿಕ ಲಸಿಕಾ ಕಾರ್ಯಕ್ರಮದ ಅಂಗವಾಗಿ ನಗರದ ಅರಬ್ ಮೊಹಲ್ಲಾದ ಚುನ್ನಾಬಟ್ಟಿ ಕಾಲೋನಿಯ ಅಂಗನವಾಡಿ ಕೇಂದ್ರದಲ್ಲಿ ಆಯೋಜಿಸಿದ್ದ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಬಾಲ್ಯದಲ್ಲಿ ಬರುವ ಕೆಲವು ರೋಗಗಳು ಜೀವಕ್ಕೆ ಅಪಾಯಕಾರಿಯಾಗಿದ್ದರೆ, ಇನ್ನೂ ಕೆಲವು ಮಕ್ಕಳನ್ನು ದೀರ್ಘಕಾಲ ಆರೋಗ್ಯ ಸಮಸ್ಯೆಗಳಿಗೆ ಒಳಪಡಿಸಬಹುದು. ಹೀಗಾಗಿ ಪಾಲಕರು ಮನೆಯ ಕೆಲಸದ ಒತ್ತಡದ ನಡುವೆಯೂ ಮಕ್ಕಳ ಲಸಿಕಾ ವೇಳಾಪಟ್ಟಿಯನ್ನು ತಪ್ಪಿಸಬಾರದು. ಮಗುವಿಗೆ ಎರಡು ವರ್ಷ ತುಂಬುವವರೆಗೆ ಪೂರಕ ಆಹಾರದೊಂದಿಗೆ ತಾಯಿಯ ಎದೆಹಾಲು ನೀಡುವುದನ್ನೂ ಮುಂದುವರಿಸಬೇಕು ಎಂದು ಸಲಹೆ ನೀಡಿದರು.

ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಸಯ್ಯ ಮಾತನಾಡಿ, ತಾಯಿ ಮತ್ತು ಮಗುವಿನ ಆರೋಗ್ಯದ ದೃಷ್ಟಿಯಿಂದ ಎರಡನೇ ಮಗುವಿನ ಜನನಕ್ಕೆ ಕನಿಷ್ಠ ಮೂರು ವರ್ಷಗಳ ಅಂತರ ಕಾಯ್ದುಕೊಳ್ಳುವುದು ಉತ್ತಮ. ಇದಕ್ಕಾಗಿ ಆರೋಗ್ಯ ಇಲಾಖೆಯಲ್ಲಿ ವಿವಿಧ ಕುಟುಂಬ ಕಲ್ಯಾಣ ವಿಧಾನಗಳು ಉಚಿತವಾಗಿ ಲಭ್ಯವಿವೆ ಎಂದು ತಿಳಿಸಿದರು.

ಮಹಿಳೆಯರಿಗೆ ಕಾಪ-ರ್ಟಿ, ಮಾಲಾ-ಎನ್, ಛಾಯಾ ಮಾತ್ರೆಗಳು ಹಾಗೂ ಮೂರು ತಿಂಗಳಿಗೊಮ್ಮೆ ಪಡೆಯಬಹುದಾದ ಗರ್ಭನಿರೋಧಕ ಚುಚ್ಚುಮದ್ದು ಲಭ್ಯವಿದ್ದು, ಪುರುಷರಿಗೆ ಕಾಂಡೋಮ್ ಬಳಕೆಯ ಸೌಲಭ್ಯವಿದೆ. ಮಕ್ಕಳ ಸಂಖ್ಯೆ ಪೂರ್ಣಗೊಂಡ ದಂಪತಿಗಳಿಗೆ ಲ್ಯಾಪರೋಸ್ಕೋಪಿಕ್, ಟ್ಯೂಬೆಕ್ಟಮಿ ಹಾಗೂ ಪುರುಷರಿಗೆ ಎನ್ ಎಸ್ವಿ ಶಸ್ತ್ರಚಿಕಿತ್ಸೆಯ ಸೌಲಭ್ಯವೂ ಲಭ್ಯವಿದೆ ಎಂದು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಪುಂಡಲಿಕ ಗಂಜಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಎಚ್. ದಾಸಪ್ಪನವರ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಸರೋಜಾ ಕೆ., ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿ ಸುನಿತಾ, ಆರೋಗ್ಯ ನಿರೀಕ್ಷಣಾಧಿಕಾರಿ ಬಸವರಾಜ್, ಆಶಾ ಕಾರ್ಯಕರ್ತೆ ಹಂಪಮ್ಮ ಹಾಗೂ ತಾಯಂದಿರು ಉಪಸ್ಥಿತರಿದ್ದರು.

# ರಂಗಭೂಮಿ ಸಮಾಜ ಜಾಗೃತಿಯ ಶಕ್ತಿಯುತ ಮಾಧ್ಯಮ: ಪ್ರಕಾಶ್ ಗದ್ದೆ



ದೇವದುರ್ಗ: ರಂಗಭೂಮಿ ನಾಡಿನ ಕಲೆ, ಸಂಸ್ಕೃತಿ ಮತ್ತು ಪರಂಪರೆಯನ್ನು ಮುಂದಿನ ಪೀಳಿಗೆಗೆ ಕೊಂಡೊಯ್ಯುವ ಪ್ರಮುಖ ಮಾಧ್ಯಮವಾಗಿದ್ದು, ಸಮಾಜದ ಸಮಸ್ಯೆಗಳು ಹಾಗೂ ಮಾನವೀಯ ಮೌಲ್ಯಗಳನ್ನು ಪರಿಣಾಮಕಾರಿಯಾಗಿ ಜನರಿಗೆ ತಲುಪಿಸುವ ಶಕ್ತಿ ಹೊಂದಿದೆ ಎಂದು ಗಬ್ಬೂರಿನ ನಿವೃತ್ತ ಶಿಕ್ಷಕ ಪ್ರಕಾಶ್ ಗದ್ದೆ ಹೇಳಿದರು.

ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ, ಜಿಲ್ಲಾ ವೀರಶೈವ ಲಿಂಗಾಯತ ಸಮಾಜದ ಹೇರೂರು ಚಂದ್ರಾಯಗೌಡ ಮಲ್ದಾರ ಸಿದ್ದಪ್ಪಗೌಡ ಕರೆಡ್ಡಿ ಶಿಕ್ಷಣ ಮಹಾವಿದ್ಯಾಲಯ ಹಾಗೂ ರಾಷ್ಟ್ರೀಯ ಸೇವಾ ಯೋಜನೆ ಘಟಕದ ವತಿಯಿಂದ ದೇವದುರ್ಗ ತಾಲೂಕಿನ ಗಬ್ಬೂರಿನ ಎಸ್ಎಲ್ಡಿ ಪಬ್ಲಿಕ್ ಶಾಲೆಯಲ್ಲಿ ನಡೆಯುತ್ತಿರುವ ವಾರ್ಷಿಕ ವಿಶೇಷ ಶಿಬಿರದ ಐದನೇ ದಿನ "ರಂಗಭೂಮಿಯ ಅಳಿವು-ಉಳಿವು" ವಿಷಯದ ಕುರಿತು ಆಯೋಜಿಸಿದ್ದ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಆಧುನಿಕ ತಂತ್ರಜ್ಞಾನ ಮತ್ತು ಬದಲಾಗುತ್ತಿರುವ ಜೀವನಶೈಲಿಯಿಂದ ರಂಗಭೂಮಿ ಹಲವು ಸವಾಲುಗಳನ್ನು ಎದುರಿಸುತ್ತಿದೆ. ಯುವಜನರು ರಂಗಕಲೆಯತ್ತ ಆಸಕ್ತಿ ಬೆಳೆಸಿಕೊಂಡು ಅದರ ಸಂರಕ್ಷಣೆ ಹಾಗೂ ಬೆಳವಣಿಗೆಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು. ರಂಗಕಲೆಯು ಕಲಿಕೆ, ಅನುಭವ ಮತ್ತು ವ್ಯಕ್ತಿತ್ವ ವಿಕಾಸಕ್ಕೆ ಅವಕಾಶ ನೀಡುವ ರಂಗಭೂಮಿಯ ವಿಶ್ವವಿದ್ಯಾಲಯದಂತಿದೆ ಎಂದು ಹೇಳಿದರು.

ಸಾಹಿತಿ ದಾನಮ್ಮ ಸುಭಾಷಚಂದ್ರ ಮಾತನಾಡಿ, ರಂಗಭೂಮಿ ಕೇವಲ ಮನರಂಜನೆಗೆ ಸೀಮಿತವಾಗಿಲ್ಲ. ಸಮಾಜದ ಸಮಸ್ಯೆಗಳನ್ನು ಜನರ ಮುಂದಿಟ್ಟು ಅರಿವು ಮೂಡಿಸುವ ಪರಿಣಾಮಕಾರಿ ಕಲಾ ಮಾಧ್ಯಮವಾಗಿದೆ ಎಂದರು.

ನಿವೃತ್ತ ಪೊಲೀಸ್ ಅಧಿಕಾರಿ ರಾಜಶೇಖರ ಮಾತನಾಡಿ, ಸಾಮಾಜಿಕ ಜಾಗೃತಿ ಮೂಡಿಸುವಲ್ಲಿ ರಂಗಭೂಮಿಯ ಕೊಡುಗೆ ಮಹತ್ವದ್ದಾಗಿದ್ದು, ಕಲಾವಿದರು ಹಾಗೂ ಯುವಜನರು ರಂಗಕಲೆಯ ಉಳಿವಿಗೆ ಕೈಜೋಡಿಸಬೇಕು ಎಂದು ತಿಳಿಸಿದರು.

ಮಹಾವಿದ್ಯಾಲಯದ ಪ್ರಾಂಶುಪಾಲ ಡಾ. ಮಂಜುನಾಥ ಪಾಟೀಲ ವಟಗಲ ಮಾತನಾಡಿ, ರಂಗಭೂಮಿಯಲ್ಲಿ ಭಾಗವಹಿಸುವುದರಿಂದ ವಿದ್ಯಾರ್ಥಿಗಳಲ್ಲಿ ಸೃಜನಶೀಲತೆ, ಆತ್ಮವಿಶ್ವಾಸ, ಸಂವಹನ ಕೌಶಲ್ಯ ಹಾಗೂ ಸಾಮಾಜಿಕ ಜವಾಬ್ದಾರಿ ಬೆಳೆಯುತ್ತದೆ ಎಂದರು.

ಹಿರಿಯ ಉಪನ್ಯಾಸಕಿ ಹಂಪಮ್ಮ ಮಾತನಾಡಿ, ಶಿಕ್ಷಣದೊಂದಿಗೆ ರಂಗಚಟುವಟಿಕೆಗಳನ್ನು ಬೆಸೆಯುವುದರಿಂದ ವಿದ್ಯಾರ್ಥಿಗಳ ಸಮಗ್ರ ವ್ಯಕ್ತಿತ್ವ ವಿಕಾಸಕ್ಕೆ ನೆರವಾಗುತ್ತದೆ ಎಂದು ಹೇಳಿದರು.

ಎನ್ಎಸ್ಎಸ್ ಕಾರ್ಯಕ್ರಮಾಧಿಕಾರಿ ಶಶಿಕುಮಾರ ಮಾತನಾಡಿ, ವಿಶೇಷ ಶಿಬಿರಗಳಲ್ಲಿ ಸಾಂಸ್ಕೃತಿಕ ಮತ್ತು ಸಾಮಾಜಿಕ ಜಾಗೃತಿ ಕಾರ್ಯಕ್ರಮಗಳಿಗೆ ಆದ್ಯತೆ ನೀಡುವುದರಿಂದ ಪ್ರಶಿಕ್ಷಣಾರ್ಥಿಗಳಲ್ಲಿ ಸೇವಾ ಮನೋಭಾವ ಮತ್ತು ಸಮಾಜಮುಖಿ ಚಿಂತನೆ ಬೆಳೆಸಲು ಸಾಧ್ಯವಾಗುತ್ತದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ವೀರಶೈವ ಲಿಂಗಾಯತ ಸಮಾಜದ ಗೌರವಾಧ್ಯಕ್ಷ ಹರವಿ ನಾಗನಗೌಡ, ರಂಗಭೂಮಿ ನಮ್ಮ ಪರಂಪರೆಯ ಪ್ರತಿಬಿಂಬವಾಗಿದ್ದು, ಅದನ್ನು ಉಳಿಸಿ ಬೆಳೆಸುವುದು ಎಲ್ಲರ ಜವಾಬ್ದಾರಿ ಎಂದು ಹೇಳಿದರು.

ಕಾರ್ಯಕ್ರಮದ ಸಂಯೋಜಕ ಡಾ. ಸಿದ್ಧರಾಮಯ್ಯ ಹಿರೇಮಠ, ಉಪನ್ಯಾಸಕರಾದ ವೀರನಗೌಡ, ಹೇಮರೆಡ್ಡಿ ಪಾಟೀಲ, ಉತ್ತಪ್ಪ ಕೆ., ಈರಪ್ಪ ಸರ್ಜಾಪುರ ಹಾಗೂ ಎನ್ಎಸ್ಎಸ್ ಶಿಬಿರದ ಪ್ರಶಿಕ್ಷಣಾರ್ಥಿಗಳು ಉಪಸ್ಥಿತರಿದ್ದರು.

# ದೇವರಾಜು ಅರಸು ವಿಶೇಷ ವರ್ಗದ ಫಲಾನುಭವಿಗಳಿಗೆ ನಿವೇಶನ ಮಂಜೂರಿಗೆ ಆಗ್ರಹ



ರಾಯಚೂರು: ದೇವರಾಜು ಅರಸು ವಿಶೇಷ ವರ್ಗ ಯೋಜನೆಯಡಿ ನಿವೇಶನ ಕೋರಿ ಸಲ್ಲಿಸಿರುವ ಅರ್ಜಿಗಳ ಪರಿಶೀಲನೆ ನಡೆದು ಸುಮಾರು ಎರಡು ವರ್ಷ ಕಳೆದರೂ ಫಲಾನುಭವಿಗಳ ಪಟ್ಟಿಯನ್ನು ಜಿಲ್ಲಾಡಳಿತಕ್ಕೆ ಕಳುಹಿಸದೆ ವಿಳಂಬ ಮಾಡಲಾಗುತ್ತಿದೆ ಎಂದು ಆರೋಪಿಸಿ, ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಂಡು ಅರ್ಹರಿಗೆ ಶೀಘ್ರ ನಿವೇಶನ ಮಂಜೂರು ಮಾಡಬೇಕು ಎಂದು ಒತ್ತಾಯಿಸಲಾಗಿದೆ.

ಯೋಜನೆಯಡಿ ವಿಧವೆಯರು, ಮನೆಗೆಲಸ ಮಾಡುವ ಮಹಿಳೆಯರು, ಅಂಗವಿಕಲರು, ತರಕಾರಿ ಹಾಗೂ ಬೀದಿ ವ್ಯಾಪಾರಿಗಳು, ವಿಧುರರು, ದೇವದಾಸಿ ಮಹಿಳೆಯರು, ಅಲೆಮಾರಿ ಸಮುದಾಯದವರು, ಸಫಾಯಿ ಕರ್ಮಚಾರಿಗಳು, ಪೌರಕಾರ್ಮಿಕರು ಸೇರಿದಂತೆ ವಿವಿಧ ವಿಶೇಷ ವರ್ಗಗಳಿಗೆ ಸೇರಿದವರು ನಿವೇಶನಕ್ಕಾಗಿ ಮಹಾನಗರ ಪಾಲಿಕೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ಅರ್ಜಿ ಸಲ್ಲಿಸಿದ್ದಾರೆ. ಆದರೆ ಎರಡು ವರ್ಷ ಕಳೆದರೂ ಫಲಾನುಭವಿಗಳ ಪಟ್ಟಿಯನ್ನು ಜಿಲ್ಲಾಡಳಿತಕ್ಕೆ ಕಳುಹಿಸಿಲ್ಲ ಎಂದು ಮನವಿಯಲ್ಲಿ ಆರೋಪಿಸಲಾಗಿದೆ.

ಈ ವಿಷಯವನ್ನು ಈಗಾಗಲೇ ಜಿಲ್ಲಾಧಿಕಾರಿಗಳ ಗಮನಕ್ಕೆ ತಂದಿದ್ದರೂ ಯೋಜನೆ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಅಗತ್ಯ ಕ್ರಮ ಕೈಗೊಂಡಿಲ್ಲ. ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳ ಸಭೆ ಕರೆದು ಪ್ರಕ್ರಿಯೆಯನ್ನು ಚುರುಕುಗೊಳಿಸದಿರುವುದರಿಂದ ಅರ್ಹ ಫಲಾನುಭವಿಗಳು ಸರ್ಕಾರದ ಯೋಜನೆಯ ಸೌಲಭ್ಯದಿಂದ ವಂಚಿತರಾಗುತ್ತಿದ್ದಾರೆ ಎಂದು ಮುಖಂಡರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ವಿಶೇಷವಾಗಿ ವಿಧವೆ ಮಹಿಳೆಯರು ಸಲ್ಲಿಸಿರುವ ಅರ್ಜಿಗಳ ಪರಿಶೀಲನೆ ಪೂರ್ಣಗೊಳಿಸಿ ಅರ್ಹ ಫಲಾನುಭವಿಗಳ ಪಟ್ಟಿಯನ್ನು ಜಿಲ್ಲಾಡಳಿತಕ್ಕೆ ಕಳುಹಿಸುವ ಪ್ರಕ್ರಿಯೆಯಲ್ಲಿಯೂ ವಿಳಂಬವಾಗಿದೆ ಎಂದು ಅವರು ದೂರಿದ್ದಾರೆ.

ಅರ್ಜಿಗಳ ವಿಲೇವಾರಿಯಲ್ಲಿ ಎರಡು ವರ್ಷ ವಿಳಂಬವಾಗಿರುವ ಕುರಿತು ಪರಿಶೀಲನೆ ನಡೆಸಿ, ಮಹಾನಗರ ಪಾಲಿಕೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು. ಅಲ್ಲದೆ, ದೇವರಾಜು ಅರಸು ವಿಶೇಷ ವರ್ಗದ ಅರ್ಹ ಫಲಾನುಭವಿಗಳಿಗೆ ನಿವೇಶನ ಒದಗಿಸಲು ಅಗತ್ಯ ಭೂಮಿ ಮಂಜೂರು ಮಾಡಿ 15 ದಿನಗಳೊಳಗೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

ನಿಗದಿತ ಅವಧಿಯಲ್ಲಿ ಬೇಡಿಕೆಗೆ ಸ್ಪಂದಿಸದಿದ್ದರೆ ಜಿಲ್ಲಾಧಿಕಾರಿ ಕಚೇರಿ ಎದುರು ಅನಿರ್ದಿಷ್ಟಾವಧಿ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಸಿದ್ದಾರೆ.

ಮನವಿಯಲ್ಲಿ ಅಧ್ಯಕ್ಷ ಜನಾರ್ಧನ್ ಹಳ್ಳಿಬೆಂಚಿ, ಪ್ರಧಾನ ಕಾರ್ಯದರ್ಶಿ ಬಸವರಾಜ್ ಹೊಸೂರು, ಉಪಾಧ್ಯಕ್ಷರಾದ ಶರಣಬಸವ, ನೂರ್ ಜಾನ್, ರಾಜಶೇಖರ್, ಮಹೇಶ್ ಹಾಗೂ ಯುವ ಮುಖಂಡ ಎಸ್. ನಾಗರಾಜ್ ಸೇರಿದಂತೆ ಇತರರು ಒತ್ತಾಯಿಸಿದ್ದಾರೆ.

# ಸಫಾಯಿ ಕರ್ಮಚಾರಿಗಳ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸಲು ಕ್ರಮ: ಹರದೀಪ್ ಸಿಂಗ್ ಗಿಲ್



ರಾಯಚೂರು: ಭಾರತ ಸರ್ಕಾರದ ಸಫಾಯಿ ಕರ್ಮಚಾರಿ ಆಯೋಗದ ಸದಸ್ಯ ಹರದೀಪ್ ಸಿಂಗ್ ಗಿಲ್ ಅವರು ರಾಯಚೂರು ನಗರಕ್ಕೆ ಭೇಟಿ ನೀಡಿ, ಸಫಾಯಿ ಕರ್ಮಚಾರಿಗಳು ಹಾಗೂ ಪೌರಕಾರ್ಮಿಕರು ಎದುರಿಸುತ್ತಿರುವ ಸಮಸ್ಯೆಗಳ ಕುರಿತು ನೇರವಾಗಿ ಮಾಹಿತಿ ಪಡೆದುಕೊಂಡರು.

ನಗರದಲ್ಲಿಸಫಾಯಿಕರ್ಮಚಾರಿಗಳೊಂದಿಗೆ ಮುಕ್ತ ಸಂವಾದ ನಡೆಸಿದ ಅವರು, ಕೆಲಸದ ಪರಿಸ್ಥಿತಿ, ಮೂಲಸೌಕರ್ಯ, ಸುರಕ್ಷತೆ ಹಾಗೂ ಇತರ ಬೇಡಿಕೆಗಳ ಕುರಿತು ಅವರ ಅಹವಾಲುಗಳನ್ನು ಆಲಿಸಿದರು. ಕಾರ್ಮಿಕರು ಎದುರಿಸುತ್ತಿರುವ ಸಮಸ್ಯೆಗಳಿಗೆ ಹಂತ ಹಂತವಾಗಿ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಈ ವೇಳೆ ಕರ್ನಾಟಕ ಸಫಾಯಿ ಕರ್ಮಚಾರಿ ಪರಿಷತ್ ಕಾರ್ಯಕರ್ತರ ನಿಯೋಗ ಹರದೀಪ್ ಸಿಂಗ್ ಗಿಲ್ ಅವರನ್ನು ಭೇಟಿ ಮಾಡಿ, ಸಫಾಯಿ ಕರ್ಮಚಾರಿಗಳು ಹಾಗೂ ಪೌರಕಾರ್ಮಿಕರು ಎದುರಿಸುತ್ತಿರುವ ವಿವಿಧ ಜ್ವಲಂತ ಸಮಸ್ಯೆಗಳ ಕುರಿತು ಗಮನ ಸೆಳೆಯಿತು. ಕಾರ್ಮಿಕರ ಹಿತಾಸಕ್ತಿ ಕಾಪಾಡಲು ಸಂಬಂಧಪಟ್ಟ ಇಲಾಖೆಗಳಿಗೆ ಸೂಕ್ತ ನಿರ್ದೇಶನ ನೀಡಬೇಕು ಎಂದು ಮನವಿ ಮಾಡಲಾಯಿತು.

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ರವೀಂದ್ರ ಜಲ್ದಾರ್, ಕರ್ನಾಟಕ ಸಫಾಯಿ ಕರ್ಮಚಾರಿ ಪರಿಷತ್ ರಾಜ್ಯ ಸಂಘಟನಾ ಕಾರ್ಯದರ್ಶಿ ಜೆ.ಎಂ. ವೀರೇಶ್, ಜಿಲ್ಲಾಧ್ಯಕ್ಷ ಜೆ.ಎಂ. ಮೌನೇಶ್, ಮಾಜಿ ನಗರಸಭಾ ಸದಸ್ಯ ಮಂಚಲ್ ಭೀಮಣ್ಣ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಮೇಶ್ ರೆಡ್ಡಿ, ಮುಖಂಡರಾದ ಎಂ. ನರಸಿಂಹಲು, ಉಮೇಶ್, ಜಗದೀಶ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K